ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYA PRAGATHI Kannada daily

ಡಿಜಿಟಲ್ ನ್ಯೂಸ್ ಕಹಾನಿ

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 Issue: 203 ಸಂಚಿಕೆ: 203 Date: 04-09-2026 Friday RNI NO: KARKAN/2021/80805 L2/RNP-1285/TMR/2025-27 Page: 4 ಪುಟ: 4 Price: 1.00 ಬೆಲೆ: 1.00 ರೂ

ಭೀಕರ ಬರ ಪರಿಸ್ಥಿತಿ: ಕಸ್ತೂರಿ ರಂಗನ್ ವರದಿ ಕುರಿತು ಚರ್ಚೆಗಾಗಿ

ಸೆ.21ರಿಂದ ಮೂರು ದಿನಗಳ ಕಾಲ ರಾಜ್ಯ ವಿಧಾನಮಂಡಲದ ವಿಶೇಷ ಅಧಿವೇಶನ

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು: ಭೀಕರ ಬರ ಪರಿಸ್ಥಿತಿ ಹಾಗೂ ಪಶ್ಚಿಮ ಘಟ್ಟದ ಕಸ್ತೂರಿ ರಂಗನ್ ವರದಿ ಕುರಿತು ಚರ್ಚೆಸಲು ಕರ್ನಾಟಕ ಸರ್ಕಾರ ಸೆ.21ರಿಂದ ಮೂರು ದಿನಗಳ ಕಾಲ ರಾಜ್ಯ ವಿಧಾನಮಂಡಲದ ವಿಶೇಷ ಅಧಿವೇಶನ' ಕರೆಯಲು ನಿರ್ಧರಿಸಿದೆ ಎಂದು ಉಸಹ ಮುಖ್ಯಮಂತ್ರಿ,ಡಾ. ಜಿ ಪರಮೇಶ್ವರ ಗುರುವಾರ ತಿಳಿಸಿದ್ದಾರೆ.

ಮೂರು ದಿನಗಳ ಈ ಧಿವೇಶನವು ಎರಡು ವಿಷಯಗಳಿಗೆ ಪ್ರತ್ಯೇಕವಾಗಿ ಮೀಸಲಾಗಿರುತ್ತದೆ, ಯಾವುದೇ ಪ್ರಶ್ನೋತ್ತರ ಕಾಲವು ಅಥವಾ ಇತರ ನಿಯಮಿತ ಶಾಸಕಾಂಗ ವ್ಯವಹಾರಗಳಲ್ಲಿ ಎಂದು ಪರಮೇಶ್ವರ ಅವರು ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದರು.

'ಸೆ.21, 22 ಹಾಗೂ 23ರಂದು ವಿಶೇಷ ಅಧಿವೇಶನ ಕರೆಯಲು ಸಚಿವ ಸಂಪುಟ ಸಭೆ ನಿರ್ಧರಿಸಿದೆ' ಎಂದು ಪರಮೇಶ್ವರ್ ಹೇಳಿದರು. ರೈತರು ಎದುರಿಸುತ್ತಿರುವ ಸಂಕಷ್ಟ ಮತ್ತು ರಾಜ್ಯದ ಆರ್ಥಿಕತೆ ಮತ್ತು ಆಹಾರ ಭದ್ರತೆಯ ಮೇಲೆ ಬರಗಾಲದ ವ್ಯಾಪಕ ಪರಿಣಾಮದ ಬಗ್ಗೆ ಸರ್ಕಾರ ವ್ಯಾಪಕವಾದ ಚರ್ಚೆಯನ್ನು ಬಯಸಿದೆ ಎಂದು ಅವರು ಹೇಳಿದರು.

ಕರ್ನಾಟಕ ಅಸಾಧಾರಣವಾದ ಭೀಕರ ಬರಗಾಲಕ್ಕೆ ಸಾಕ್ಷಿಯಾಗಿದೆ ಮತ್ತು ಅದರ ಪರಿಣಾಮಗಳ ಬಗ್ಗೆ ವಿಧಾನಸಭೆಯಲ್ಲಿ ಚರ್ಚಿಸುವ ಅಗತ್ಯವಿದೆ ಎಂದು ಪರಮೇಶ್ವರ ಹೇಳಿದರು.

ಕಸ್ತೂರಿರಂಗನ್ ವರದಿಯನ್ನು ರಾಜ್ಯವು ಈ ಹಿಂದೆ ಹಲವಾರು ಬಾರಿ ತಿರಸ್ಕರಿಸಿದ್ದರಿಂದ ಅದನ್ನು ಸಹ ಕೈಗೆತ್ತಿಕೊಳ್ಳಲಾಗುವುದು ಎಂದು ಅವರು ಹೇಳಿದರು.

ಈ ಬಗ್ಗೆ ಜನತೆಗೆ ಒಮ್ಮೆ ತಿಳಿಸಲು ಬಯಸಿದ್ದು, ವಿಶೇಷ ಅಧಿವೇಶನದಲ್ಲಿ ಕಸ್ತೂರಿರಂಗನ್ ವರದಿ ಬಗ್ಗೆಯೂ ಚರ್ಚೆ ನಡೆಸುತ್ತೇವೆ ಎಂದರು.

ಕಸ್ತೂರಿರಂಗನ್ ಸಮಿತಿಯ ವರದಿಯು ಪ್ರಾದೇಶಿಕ ಅಭಿವೃದ್ಧಿಯೊಂದಿಗೆ ಪರಿಸರ ಸಂರಕ್ಷಣೆಯನ್ನು ಸಮತೋಲನಗೊಳಿಸಲು ಪಶ್ಚಿಮ ಘಟ್ಟಗಳ ಶೇಕಡಾ 37 ರಷ್ಟು (ಸುಮಾರು 60,000 ಚದರ ಕಿಲೋಮೀಟರ್) ಪರಿಸರ-ಸೂಕ್ಷ್ಮ ಪ್ರದೇಶ ಎಂದು ಗುರುತಿಸಲು ಪ್ರಸ್ತಾಪಿಸಿದೆ. ಇದೇ ವೇಳೆ ಅನಿಷಾ ಭಾರತೀಯರ ಕಲ್ಯಾಣ





ಹರಮೇಶ್ವರ ಅವರು, ವಿದೇಶಿ ಹೂಡಿಕೆದಾರರುಕೆಲವುಸಂದರ್ಭಗಳಲ್ಲಿ ಕರ್ನಾಟಕಕ್ಕೆ ಆಗಮಿಸಿದ್ದರು ಆದರೆ ಸಕಾಲಿಕ ಗಮನವನ್ನು ಪಡೆಯುವಲ್ಲಿ ವಿಫಲರಾಗಿದ್ದಾರೆ, ಇತರ ಸ್ಥಳಗಳನ್ನು ಪರಿಗಣಿಸುವಂತೆ ಪ್ರೇರೇಪಿಸಿದರು.

ವಿದೇಶಿ ಹೂಡಿಕೆದಾರರು ಕೆಲವೊಮ್ಮೆ ಬಂದು ಕಾಯುತ್ತಾರೆ, ಆದರೆ ಯಾರೂ ಅವರನ್ನು ಗಮನಿಸುವುದಿಲ್ಲ. ಅವರು ನಿರಾಶೆಗೊಂಡು ಬೇರೆ ರಾಜ್ಯಕ್ಕೆ ಹೋಗುತ್ತಾರೆ ಅಥವಾ ಹೂಡಿಕೆ ಮಾಡಲು ಬೇರೆಡೆಗೆ ಹೋಗುತ್ತಾರೆ. ಇಂತಹ ಅನೇಕ ನಿದರ್ಶನಗಳನ್ನು ನಾವು ಕೇಳಿದ್ದೇವೆ. ಅವನ್ನು ಸರಿಪಡಿಸಲು, ಸರ್ಕಾರವು ಇದನ್ನು ಪ್ರಮುಖ ನಿರ್ಧಾರವಾಗಿ ತೆಗೆದುಕೊಂಡಿದೆ," ಅವರು ಹೇಳಿದರು.

ಹೊಸ ಇಲಾಖೆಯು ಕೈಗಾರಿಕೆ ಇಲಾಖೆ ಅಥವಾ ಇತರ ಬಲಯದ ಜವಾಬ್ದಾರಿಗಳನ್ನು ವಹಿಸಿಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಬದಲಾಗಿ, ಇದು ಹೂಡಿಕೆದಾರರೊಡೆಗೆ ಗಮನ ಹರಿಸುತ್ತದೆ, ಮುಖ್ಯಮಂತ್ರಿಯೊಂದಿಗೆ ಅವರ ಸಂವಾದವನ್ನು ಸುಲಭಗೊಳಿಸುತ್ತದೆ ಮತ್ತು ಮುಂದಿನ ಕ್ರಮಕ್ಕಾಗಿ ಸೂಕ್ತ ಇಲಾಖೆಗೆ ಪ್ರಸ್ತಾವನೆಗಳನ್ನು ರವಾನಿಸುತ್ತದೆ ಎಂದು ಹೇಳಿದ್ದಾರೆ.

ಮತ್ತು ವ್ಯವಹಾರಗಳೊಂದಿಗೆ ವ್ಯವಹರಿಸುವಾಗ ಅಂತರರಾಷ್ಟ್ರೀಯ ಬಂಡವಾಳವನ್ನು ಆಕರ್ಷಿಸಲು ಮತ್ತು ಹೂಡಿಕೆ ಪ್ರಸ್ತಾಪಗಳನ್ನು ಸುಗಮಗೊಳಿಸಲು ಜಾಗತಿಕ ಹೂಡಿಕೆ ಮತ್ತು ಸಾಗರೋತ್ತರ ವ್ಯವಹಾರಗಳ ಇಲಾಖೆಯನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ.

ಇಲಾಖೆಯು ವಿಕ-ಗವಾಕ್ಷಿ ಸುಗಮಗೊಳಿಸುವ ಕಾರ್ಯವಿಧಾನವನ್ನು ಒದಗಿಸುತ್ತದೆ, ಅನಿವಾಸಿ ಭಾರತೀಯ ಕಾರ್ಡ್ ನ್ನು ವಿತರಿಸುತ್ತದೆ ಮತ್ತು ಸಾಗರೋತ್ತರ ಉದ್ಯೋಗಾವಕಾಶಗಳು, ವಿದೇಶಿ ನಿಯೋಗಗಳು, ಅಂತರರಾಷ್ಟ್ರೀಯ ತಾಲುದಾರಿಕೆಗಳು, ಸಂಶೋಧನೆ ಮತ್ತು ಅಭಿವೃದ್ಧಿ, ಸಾಂಸ್ಕೃತಿಕ ವಿನಿಮಯ, ಜಾಗತಿಕ ಕ್ರೀಡೆಗಳು, ಸಹೋದರಿ-ನಗರ ವ್ಯವಸ್ಥೆಗಳು ಮತ್ತು ಅಂತರರಾಷ್ಟ್ರೀಯ ಆರೋಗ್ಯ ವೈದ್ಯಕೀಯ ಮತ್ತು ಪ್ರವಾಸೋದ್ಯಮ-ಸಂಬಂಧಿತ ಉಪಕ್ರಮಗಳಿಗೆ ಸಹಾಯ ಮಾಡುತ್ತದೆ.

ಹೊಸ ಇಲಾಖೆಗೆ ತಾರ್ಕಿಕ ವಿವರಣೆ ನೀಡಿದ

ಏಕಪಕ್ಷೀಯ ತೀರ್ಮಾನ ತಡೆಗಟ್ಟಲು ರಾಜಕೀಯವ್ಯವಹಾರಗಳ ಸಮಿತಿ ರಚನೆ



ಸರ್ಕಾರದಲ್ಲಿ ಮುಖ್ಯಮಂತ್ರಿಗಳು ಏಕಪಕ್ಷೀಯ ತೀರ್ಮಾನ ಕೈಗೊಳ್ಳುತ್ತಾರೆ ಎಂಬ ಆರೋಪಗಳಿಗೆ ತೆರೆ ಎಳೆಯಲು ಮತ್ತು ಪ್ರಮುಖ ವಿಷಯಗಳನ್ನು ಚರ್ಚಿಸಿ, ನಿರ್ಧಾರ ತೆಗೆದುಕೊಳ್ಳಲು ಒಂದು ಉನ್ನತ ಸಮಿತಿಗಳನ್ನು ರಚಿಸಲಾಗಿದೆ. ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಉಪಮುಖ್ಯಮಂತ್ರಿ ಕೆ.ಹೆಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಪ್ರಿಯಾಂಕ್ ಖರ್ಗೆ, ಕೃಷ್ಣ ಬೈರೇಗೌಡ, ಡಾ. ಯತೀಂದ್ರ ಸಿದ್ದರಾಮಯ್ಯ, ಯು.ಟಿ. ಖಾದರ್, ಲಕ್ಷ್ಮಣ ಸವದಿ, ಸತೀಶ್ ಜಾರಕಿಹೊಳಿ ಹಾಗೂ ಎಂ.ಬಿ. ಪಾಟೀಲ್ ಅವರನ್ನೊಳಗೊಂಡ 'ರಾಜಕೀಯ ವ್ಯವಹಾರಗಳ ಸಮಿತಿ' ರಚಿಸಲಾಗಿದೆ. ಯಾವುದೇ ಪ್ರಮುಖ ನಿರ್ಧಾರಗಳನ್ನು ಅಧಿಕೃತವಾಗಿ ಸಚಿವ ಸಂಪುಟದ ಮುಂದೆ ಮಂಡಿಸುವ ಮುನ್ನ ಪ್ರಮುಖ ರಾಜಕೀಯ ಹಾಗೂ ನೀತಿ ವಿಷಯಗಳ ಬಗ್ಗೆ ವಿವರವಾಗಿ ಚರ್ಚಿಸಲು 10 ಸದಸ್ಯರನ್ನೊಳಗೊಂಡ 'ರಾಜಕೀಯ ವ್ಯವಹಾರಗಳ ಸಮಿತಿ ರಚನೆ ಮಾಡಲಾಗಿದೆ. ಇದರ ಜತೆಗೆ ಸರ್ಕಾರದ ಪರವಾಗಿ ಅಧಿಕೃತವಾಗಿ ಮಾತನಾಡಲು ಹಾಗೂ ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಲು ಜಿ. ಪರಮೇಶ್ವರ್ ಅವರ ನೇತೃತ್ವದಲ್ಲಿ ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಸಂತೋಷ್ ಲಾಡ್, ಯು.ಟಿ. ಖಾದರ್, ಈಶ್ವರ ಖಂಡ್ರೆ, ಹೆಚ್.ಸಿ. ಬಾಲಕೃಷ್ಣ ಮತ್ತು ಲಕ್ಷ್ಮಣ ಸವದಿ ಅವರನ್ನೊಳಗೊಂಡ ವಕ್ತಾರರ ಸಮಿತಿಯನ್ನು ರಚಿಸಲಾಗಿದೆ.

ಇನ್ನು ಸಚಿವ ಸಂಪುಟ ಸಭೆಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಡಿಸಿಎಂ ಡಾ.ಜಿ ಪರಮೇಶ್ವರ್, ಸಚಿವರ ತಂಡವನ್ನು ರಚಿಸಿ ಮಾಡಲಾಗಿದೆ. ಪ್ರಮುಖ ನಿರ್ಣಯಕೈಗೊಳ್ಳುವಾಗ ಕ್ಯಾಬಿನೆಟ್ ಬರುವ ಮೊದಲೇ ಚರ್ಚೆ ಆಗ್ತಿತ್ತು ಕೆಲ ನಿರ್ಧಾರ ಕೈಗೊಳ್ಳುವ ಸಂದರ್ಭದಲ್ಲಿ ಈ ಸಚಿವರ ಕಮಿಟಿ ಚರ್ಚೆ ನಡೆಸುತ್ತದೆ. ಸಿಎಂ ಒಬ್ಬರೇ ತೀರ್ಮಾನ ಮಾಡುತ್ತಾರೆ ಅನ್ನುವ ಭಾವನೆ ಬರುತ್ತೆ.

ಹೀಗಾಗಿ ಪ್ರಮುಖ ಸಚಿವರ ಕಮಿಟಿ ರಚನೆ ಮಾಡಿದ್ದೇವೆ ಎಂದು ಸ್ಪಷ್ಟಪಡಿಸಿದರು.

ಜಾಗತಿಕ' ಹೂಡಿಕೆ ಮತ್ತು ವಿದೇಶಾಂಗ' ವ್ಯವಹಾರಗಳ ಇಲಾಖೆ ಸ್ಥಾಪನೆ ಇದರ ಜೊತೆಗೆ ಸೂರ್ಯ ಪ್ರಗತಿ ನ್ಯೂಸ್ ಕಹಾನಿ ಎಂಬ ಡಿಜಿಟಲ್ ಮಾಧ್ಯಮ ಸಂಸ್ಥೆಯ ಸಹಭಾಗಿತ್ವದಲ್ಲಿ ಈಗ ಮತ್ತೆ ಚರ್ಚೆಗೆ ಬಂದಿದೆ. ಈಗಾಗಲೇ ನಾಲ್ಕೈದು ಬಾರಿ ಇದನ್ನ ರಿಜಿಕ್ಟ್ ಮಾಡಿದ್ದೇವೆ. ಆದರೂ ಕೂಡ ಇನ್ನು ಅದರ ಬಗ್ಗೆ ಚರ್ಚೆಗಳು ಬರ್ತಾ ಇದಾವೆ. ಹೀಗಾಗಿ ಈ ಬಗ್ಗೆಯೂ ಅಧಿವೇಶನದಲ್ಲಿ ಚರ್ಚೆ ಆಗುವುದೆ ಎಂದವರು ತಿಳಿಸಿದ್ದಾರೆ. ಜೊತೆಗೆ ರಾಜ್ಯದಲ್ಲಿ ಹೊಸ ಜಾಗತಿಕ ಹೂಡಿಕೆ ಮತ್ತು ವಿದೇಶಾಂಗ' ವ್ಯವಹಾರಗಳ ಇಲಾಖೆ ಸ್ಥಾಪನೆಗೆ ತೀರ್ಮಾನಿಸಲಾಗಿದೆ. ಮುಂದೆ ಸರ್ಕಾರಗಳ ಹೆಸರು ಮುಂದೆ ಬದಲಾಗಬಹುದು. ಈ ಯೋಜನೆ ಮೂಲಕ' ಓಖಿಞ ಕರ್ನಾ ವಿತರಣೆ ಮಾಡುವ ಜೊತೆಗೆ ಉದ್ಯೋಗ ಅವಕಾಶ ನೀಡಲು ಈ ಯೋಜನೆ ನೆರವು ನೀಡಲಿದೆ ಎಂದವರು ಹೇಳಿದ್ದಾರೆ.

ಕೆಪಿಎಸ್‌ಸಿ ಹಗರಣ: ಐಎಎಸ್ ಜ್ಞಾನೇಂದ್ರ ಕುಮಾರ್ ಅಮಾನತು

ಸೂರ್ಯಪ್ರಗತಿನ್ಯೂಸ್.ಕಾಂ





ಕೆಪಿಎಸ್‌ಸಿ ಹಿರಿಯ ಅಧಿಕಾರಿ ನೇಮಕಾತಿಯಲ್ಲಿ ಅಕ್ರಮ ಪ್ರಕರಣದ ತನಿಖೆ ಸಿಐಡಿ ತೀವ್ರಗೊಳಿಸಿದೆ. ಆಯೋಗದ ಪರೀಕ್ಷಾ ನಿಯಂತ್ರಕರಾಗಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರಕುಮಾರ್ ಅವರನ್ನು ಬಂಧಿಸಿ ವಿಚಾರಣೆಗೆ ಗೊಳಪಡಿಸಿದ್ದು ಈ ವೇಳೆ ಸ್ಫೋಟಕ ಅಂಶಗಳು ಬಯಲಿಗೆ ಬಂದಿದ್ದು ಐಎಎಸ್ ಅಕ್ರಮದಲ್ಲಿ ಭಾಗಿಯಾಗಿರುವುದು ದೃಢಪಟ್ಟಿದೆ. ಹೀಗಾಗಿ ರಾಜ್ಯ ಸರ್ಕಾರ, ಜ್ಞಾನೇಂದ್ರ ಕುಮಾರ್ ಅವರನ್ನ ಅಮಾನತು ಮಾಡಿದೆ.

ನ್ಯಾಷನಲ್ ಲೋಕೇಸಾ ಆಯೋಗ (ಕೆಪಿಎಸ್‌ಸಿ) ಹಿರಿಯ ಅಧಿಕಾರಿ ನೇಮಕಾತಿಯಲ್ಲಿ ಅಕ್ರಮವೆಸಗಿದ್ದ ಆರೋಪ ಹಿನ್ನೆಲೆಯಲ್ಲಿ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಭಾಗಿಯಾಗಿರುವುದು ದೃಢಪಟ್ಟಿದೆ. ಪರೀಕ್ಷಾ ನಿಯಂತ್ರಕರಾಗಿದ್ದ ಜ್ಞಾನೇಂದ್ರ ಕುಮಾರ್ ಮತ್ತು ಮಧ್ಯವರ್ತಿ ಬಸವರಾಜ್ ಕನ್ನಾಳ ಕಂಟ್ರೋಲ್‌ಸೆಲ್‌ನ ಫಿಲ್ಟ್ರೆಸ್ಟರ್‌ನಲ್ಲಿದ್ದುಕೊಂಡು ಅಭ್ಯರ್ಥಿಗಳಿಂದ ಲಂಚ ಪಡೆದಿರುವುದು ಸಿಐಡಿ ತನಿಖೆಯಲ್ಲಿ ಬಯಲಾಗಿದೆ. ಬಿಜಿಎಸ್ ಶೀಟ್ ತಿದ್ದುಪಡಿ, ಪ್ರಶ್ನೆ ಪತ್ರಿಕೆ ಲೀಕ್ ಮಾಡಿರುವುದು ಬಟಾಬಯಲಾಗಿದೆ. ಹೀಗಾಗಿ ರಾಜ್ಯ ಸರ್ಕಾರ ಜ್ಞಾನೇಂದ್ರ ಕುಮಾರ್ ಅವರನ್ನು ಅಮಾನತು ಮಾಡಿ ಇಂದು (ಸೆಪ್ಟೆಂಬರ್ 03) ಆದೇಶ ಹೊರಡಿಸಿದೆ. ಇದರೊಂದಿಗೆಕೆಪಿಎಸ್‌ಸಿ ಅಕ್ರಮದಲ್ಲಿ ಮೊದಲು ತಲೆದಂಡವಾದಂತಾಗಿದೆ.

ಇಇ ಕೋಧನೆ ಮತ್ತು ಜಪ್ತಿಕಾರ್ಯಾಚರಣೆ ವೇಳೆ ಭ್ರಷ್ಟಾಚಾರ ಸಾಬೀತಾಗಿದೆ. ವಿಕಿಪೀಡಿಯಾ ನೇಮಕಾತಿ ಪ್ರಕ್ರಿಯೆಗಳಲ್ಲಿ ಭ್ರಷ್ಟಾಚಾರ ಪುರಾವೆ ಪತ್ತೆಯಾಗಿವೆ. ಇನ್ನು KPSC ಪರೀಕ್ಷಾ ನಿಯಂತ್ರಕರಾಗಿದ್ದ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅವರನ್ನು ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ. ಅಲ್ಲದೆ ಮಾಜಿ ಸಚಿವ ಭಾರತ ಸೇವಿಗಳ ನಿಯಮ ಉಲ್ಲಂಘನೆ ಹಾಗೂ 48 ಗಂಟೆಗಳಿಗಿಂತ ಹೆಚ್ಚು ಕಾಲ ಪೊಲೀಸ್ ಕಸ್ಟಡಿ ಹಿನ್ನೆಲೆ CID ತನಿಖೆ ಮುಕ್ತಾಯವಾಗುವವರೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಜ್ಞಾನೇಂದ್ರಕುಮಾರ್ ನನ್ನು ಅಮಾನತು ಮಾಡಿ ಸರ್ಕಾರ ಆದೇಶಿಸಿದೆ. ಉತ್ತರ ಪ್ರದೇಶದ ಮೂಲದ ಜ್ಞಾನೇಂದ್ರ ಕುಮಾರ್ 2016ರ ಬ್ಯಾಚ್ ಐಎಎಸ್ ಅಧಿಕಾರಿ. 2024ರ ಫೆಬ್ರವರಿಯಿಂದ ಮಾರ್ಚ್ 2026ರವರೆಗೆ ಕೆಪಿಎಸ್‌ಸಿಯಲ್ಲಿ ಪರೀಕ್ಷಾ ನಿಯಂತ್ರಕರಾಗಿ ಕಾರ್ಯನಿರ್ವಹಿಸಿದ್ದರು. ಕಳೆದ ಮಾರ್ಚ್‌ನಲ್ಲಿ ವಾರ್ಷಿಕಗೊಂಡಿದ್ದರು. ಪ್ರಸ್ತುತ ಸೂಕ್ಷ್ಮ ಸಣ್ಣಮತ್ತು ಮಧ್ಯಮ ಉದ್ಯಮಗಳ ಇಲಾಖೆ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದರು.

ಈಗಾಗಲೇ ಸಿಐಡಿ ಪೊಲೀಸರಿಂದ ಬಂಧನ ಕ್ಕೊಳಗಾಗಿರುವ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಅವರೊಂದಿಗೆ ಬಸವರಾಜ ಕನ್ನಾಳ್ ನಿರಂತರ ಸಂಪರ್ಕದಲ್ಲಿದ್ದ. ಅಕ್ರಮ ನೇಮಕಾತಿ ಪ್ರಕ್ರಿಯೆಯಲ್ಲಿ ಈತ ಸಹ ಪ್ರಮುಖ ಪಾತ್ರ ವಹಿಸಿರುವ ಶಂಕೆಯ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿರುವ ಕರ್ನಾಟಕ ಭವನ ಕಾರ್ಯಾಚರಣೆ ನಡೆಸಿ ಆತನನ್ನು ವಶಕ್ಕೆ ಪಡೆಯಲಾಗಿತ್ತು. ಇಬ್ಬರನ್ನೂ ಇಂದು 1ನೇ ಎಸಿಜೆಎಂ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು ಸೆಪ್ಟೆಂಬರ್ 9ರವರೆಗೂ ಕಸ್ಟಡಿಗೆ ನೀಡಿ ನ್ಯಾಯಾಲಯ ಆದೇಶಿಸಿದೆ.

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಇದೇ ವರ್ಷ ಜನವರಿ 8 ಹಾಗೂ 9ರಂದು ನಡೆಸಿದ್ದ ಪಶು ವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯಲ್ಲಿ ಅಭ್ಯರ್ಥಿಗಳಿಂದ ಸುಮಾರು 700ಂದ 80 ಲಕ್ಷ ರೂಪಾಯಿಗಳವರೆಗೆ ಲಂಚ ಪಡೆದಿರುವ ಗಂಭೀರ ಆರೋಪಕೇಳಿ ಬಂದ ಬಿಸ್ಸೆಲೆಯಲ್ಲಿ ಇಡಿ ತನಿಖೆ ನಡೆಸಿದೆ. ಅಲ್ಲದೆ, ರಾಜ್ಯ ಸರ್ಕಾರ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಿದೆ.

ಸೆ.5 ರಿಂದ ಜಿಲ್ಲಾದ್ಯಂತ "ಪ್ರಜಾಸೇವೆ ಆಂದೋಲನ"– ಡಿಸಿ, ಶುಭ ಕಲ್ಯಾಣ್

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಸಾರ್ವಜನಿಕರ ಕುಂದು-ಕೊರತೆಗಳನ್ನು ಆಲಿಸಿ, ಅವುಗಳಿಗೆ ಸಕಾಲದಲ್ಲಿ ಸೂಕ್ತ ಪರಿಹಾರ ಒದಗಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿಯೆ ಜಿಲ್ಲಾದ್ಯಂತ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸ್ಥಳೀಯ ಶಾಸಕರ ನೇತೃತ್ವದಲ್ಲಿ ಪ್ರತಿ ತಿಂಗಳು ಎರಡಾದರೂ ಸಾರ್ವಜನಿಕರಿಂದ "ಪ್ರಜಾಸೇವೆ ಆಂದೋಲನ" ಸಭೆಗಳನ್ನು ಆಯೋಜಿಸಲು ಸರ್ಕಾರ ನಿರ್ದೇಶಿಸಿದ್ದು, ಸೆಪ್ಟೆಂಬರ್ 5 ರಿಂದ ಅಭಿಯಾನಕ್ಕೆ ಚಾಲನೆ ದೊರೆಯಲಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಉಸ ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರ ಅಧ್ಯಕ್ಷತೆಯಲ್ಲಿ ಹಾಗೂ ಗುಬ್ಬಿ ವಿಧಾನಸಭಾ ಕ್ಷೇತ್ರದ ಶಾಸಕರು ಉಸಚ್ಚಿವಿಯಲ್ಲಿ ಗುಬ್ಬಿ ಪಟ್ಟಣದ ಡಾ: ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಸೆಪ್ಟೆಂಬರ್ 5ರಂದು ಬೆಳಿಗ್ಗೆ 10 ಗಂಟೆಗೆ ಪ್ರಜಾಸೇವಾ ಆಂದೋಲನ ಸಭೆಯನ್ನು ನಡೆಸಲಾಗುವುದು.

ಅದೇ ದಿನ ಜಿಲ್ಲೆಯ ಉಳಿದ 9 ತಾಲ್ಲೂಕುಗಳಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಪ್ರಜಾಸೇವೆ ಆಂದೋಲನ ಸಭೆ ನಡೆಯಲಿದ್ದು, ಸೆಪ್ಟೆಂಬರ್ 12ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ



ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಪ್ರಜಾಸೇವೆ ಆಂದೋಲನ ಸಭೆ ನಡೆಯಲಿದೆ.

ಜಿಲ್ಲೆಯ ಸಾರ್ವಜನಿಕರು ಅಹವಾಲುಗಳೇನಾದರೂ ಇದ್ದಲ್ಲಿ ಸೆಪ್ಟೆಂಬರ್ 5 ಹಾಗೂ 12ರಂದು ನಡೆಯುವ ಪ್ರಜಾಸೇವೆ ಆಂದೋಲನ ಸಭೆಗೆ ಖುದ್ದಾಗಿ ಹಾಜರಾಗಿ ಸಲ್ಲಿಸಬಹುದಾಗಿದೆ. ಅಲ್ಲದೇ ಸಭಾ ಸ್ಥಳಗಳಲ್ಲಿ ತೆರೆಯಲಾಗುವ ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳ ಮೂಲಕ ನಾಗರಿಕರು ತಮ್ಮ ಅಹವಾಲು /ದೂರುಗಳನ್ನು ಸಲ್ಲಿಸಿ ಪರಿಹಾರ ಕಂಡು ಕೊಳ್ಳಬಹುದಾಗಿದೆ. ಸಾರ್ವಜನಿಕರು ಈ ಆಂದೋಲನದ ಸದುಪಯೋಗ ಪಡೆದುಕೊಳ್ಳಲು ಅವರು ಮನವಿ ಮಾಡಿದ್ದಾರೆ.

ಪ್ರಜಾಸೇವೆ ಆಂದೋಲನ ಸಭೆಯನ್ನು ಸೆಪ್ಟೆಂಬರ್ 5ರಂದು ತುಮಕೂರು ಉಪವಿಭಾಗ ವ್ಯಾಪ್ತಿ ತುಮಕೂರು ತಾಲ್ಲೂಕು ಹಿಟ್ಟೂರು ಹೋಬಳಿ ಅಂಚೆಪಾಳ್ಯ ಗ್ರಾಮ ಪಂಚಾಯತಿ ಆವರಣ ಹಾಗೂ ತುರುವೇಕೆರೆ ತಾಲ್ಲೂಕು ಮಾಯಸಂದ್ರ ಹೋಬಳಿಯ ರಂಗಮಂದಿರ ಸಭಾಂಗಣದಲ್ಲಿ ನಡೆಸಲಾಗುವುದು.

ಸೆಪ್ಟೆಂಬರ್ 12ರಂದು ತುಮಕೂರು ಉಪವಿಭಾಗ ವ್ಯಾಪ್ತಿ ತುಮಕೂರು ತಾಲ್ಲೂಕು ಬೆಳ್ಳಾವಿ ಗ್ರಾಮ ಪಂಚಾಯತಿ ಆವರಣ, ಕುಣಿಗಲ್ ತಾಲ್ಲೂಕು ಎಡೆಯೂರು ಗ್ರಾಮ ಪಂಚಾಯತಿ ಆವರಣ, ಗುಬ್ಬಿ ತಾಲ್ಲೂಕು ಚೇಳೂರು ನಾಡಕಚೇರಿ ಆವರಣ; ಮಧುಗಿರಿ ಉಪವಿಭಾಗ ವ್ಯಾಪ್ತಿ ಮಧುಗಿರಿ ತಾಲ್ಲೂಕು ದೊ

ಡಿಜಿಟಲ್ ಸ್ವರ್ಶದತ್ತ ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್(SSSE)ಕಾಲೇಜು:

ಶಿಸ್ತು–ಬದ್ಧ ಚಟುವಟಿಕೆಗಳ ಜೊತೆ ವಿದ್ಯಾರ್ಥಿಗಳ ತಾಂತ್ರಿಕ ಕೌಶಲ್ಯದ ಲೇಪನ

ಸೂರ್ಯಪ್ರಗತಿನ್ಯೂಸ್.ಕಾಂ

ಶಿಕ್ಷಣ ಕ್ರಾಂತಿಯನ್ನು ಮಾಡಿದ ಅಕ್ಷರಕ್ರಾಂತಿಯ ಹರಿಕಾರ ಡಾ.ಎಚ್. ಎಂ.ಗಂಗಾಧರಯ್ಯನವರು 1959ರಲ್ಲಿ ಹುಟ್ಟು ಹಾಕಿದ 'ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆ'ಗೆ ಈಗ ಆಧುನಿಕ ಡಿಜಿಟಲ್ ಸ್ಪರ್ಶ ನೀಡುವ ಮೂಲಕ ಸಂಸ್ಥೆಯನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಲಾಗುವ ರೀತಿಯಲ್ಲಿ ಆಧುನಿಕ ಮೆರಗನ್ನು ನೀಡಲಾಗುತ್ತಿದೆ. ಅಂತರಾಷ್ಟ್ರೀಯ ಮಟ್ಟದಲ್ಲಿಯಶಸ್ವಿಯಾಗಿ ಮುನ್ನಡೆಯುತ್ತಿರುವ ಸಂಸ್ಥೆಗೆ ಬೆನ್ನೆಲುಬಾಗಿರುವವರು ಸಾಹೇ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ. ಜಿ. ಪರಮೇಶ್ವರ್ ಅವರು. ಶಿಕ್ಷಣ ಸಂಕಾಶೆಯಲ್ಲಿ ತನ್ನದೇ ಆದ ಹೆಜ್ಜೆ ಗುರುತು ಮೂಡಿಸುವಲ್ಲಿ 'ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ರೂವಾರಿಯಾಗಿರುವ ಡಾ.ಜಿ.ಪರಮೇಶ್ವರ್ ಅವರು ತಾವು ವಿದೇಶದಲ್ಲಿ ಕಲಿತ ಉನ್ನತ ಶಿಕ್ಷಣದ ಅನುಭವವನ್ನು ಧಾರೆ ಎರೆಯುತ್ತಿದ್ದಾರೆ. ಅವರು ಕಠಿಣ ಪರಿಶ್ರಮದ ಫಲದಿಂದ ಇಂದು ಸಂಸ್ಥೆ ರಾಜ್ಯದಲ್ಲಿ ಶತಕದ ಸಂಖ್ಯೆ ಹೊಂದಿರುವ ಸಮೂಹ ಸಂಸ್ಥೆಯಾಗಿದೆ. ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣದವರೆಗೂ ತನ್ನ ರೆಕ್ಕೆಗಳನ್ನು ಚಾಚಿ ಬೃಹತ್ ಆದ ಮರದಂತೆ ರಾಜ್ಯದೆಲ್ಲೆಡೆ ತನ್ನ ಬೇರುಗಳನ್ನು ಬಿಟ್ಟುಕೊಂಡಿದೆ.

ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆಗೆ ಆಧುನಿಕ ಗುಣಮಟ್ಟದ ಸ್ಪರ್ಷನೀಡಿ, ಜನಸಾಮಾನ್ಯರ ಮಕ್ಕಳು ಸಹ ಉತ್ತಮ ಶಿಕ್ಷಣ ಪಡೆಯಬೇಕು ಎಂಬ ಹೆಬ್ಬಯಕೆ ಮತ್ತು ತವಕ ಅವರಲ್ಲಿ ಇರುವುದರಿಂದ ಅಂತರಾಷ್ಟ್ರೀಯ ಮಟ್ಟದವರೆಗೆ ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆ ಬೆಳೆಸುತ್ತಿದ್ದಾರೆ. ಡಾ.ಜಿ.ಪರಮೇಶ್ವರ್ ಅವರು ಸದಾ ಓರ್ವ ವಿಜ್ಞಾನಿಯಂತೆ–ಸಂಶೋಧನೆ, 'ಕರಂತೆ ಹೊಸ–ಹೊಸ ಸವಾಲುಗಳಿಗೆ ತಮ್ಮನ್ನು ಒಡ್ಡಿಕೊಳ್ಳುತ್ತಾ ಬಂದ ಮೇಷ್ಟ್ರಂತೆ ಶಿಕ್ಷಣಿಕ ಸುಧಾರಣೆಗಳ ಜಾರಿಗೆ ಒತ್ತು ನೀಡುತ್ತಿದ್ದಾರೆ. ಇಂತಹ ಉನ್ನತ ಶಿಕ್ಷಣದ ಪ್ರಜ್ಞಾವಂತಿಕೆ ಇರುವ ವ್ಯಕ್ತಿಯ ನೆರಳಿನಲ್ಲಿ ತುಮಕೂರು ನಗರದ ಹೊರವಲಯದಲ್ಲಿ 35 ಎಕರೆ ಪ್ರದೇಶದ ವಿಶಾಲವಾದ ನಿಸರ್ಗ ತೆಕ್ಕೆಯಲ್ಲಿದೆ "ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್" ಕಾಲೇಜು. ಕೆಲವು ವರ್ಷಗಳ ಹಿಂದೆ ಊಹಿಸಲಾಗದ ಎಂದು ಕರೆಯಲ್ಪಡುತ್ತಿದ್ದ ಕಾಲೇಜು ಈಗ ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ (ಖಖಐಐ) ಕಾಲೇಜಾಗಿ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.


ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ (ಖಖಐಐ) ಗುಣಮಟ್ಟದ ಎಂಜಿನಿಯರಿಂಗ್ ಶಿಕ್ಷಣವನ್ನು ಒದಗಿಸಲು ಮತ್ತು ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ, ವೃತ್ತಿಪರ ಮತ್ತು ತಾಂತ್ರಿಕ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಲು ಅವಕಾಶಗಳನ್ನು



ಎಂಜಿನಿಯರ್‌ಗಳು ಅತ್ಯಂತ ದೊಡ್ಡ ಶಕ್ತಿಯಾಗಿ ದೇಶದ ಪ್ರಗತಿಗೆ ನೆರವಾಗುತ್ತಿದ್ದಾರೆ. ಗುಣಮಟ್ಟದ ಶಿಕ್ಷಣ ನೀಡುವ ಅನೇಕ ತಾಂತ್ರಿಕ ಕಾಲೇಜುಗಳು ವಿಶ್ವವಿದ್ಯಾಲಯದಲ್ಲಿ ತಮ್ಮ ಛಾಪು ಮೂಡಿಸಿವೆ. ಭಾರತದಲ್ಲಿ, ಎಂಜಿನಿಯರಿಂಗ್ ಶಿಕ್ಷಣ ಕೊಡುವ ಹಲವಾರು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ತಮ್ಮದೇ ಆದ ವಿಶೇಷತೆಯಲ್ಲಿ ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ ಒಂದಾಗುತ್ತಿರುವುದು ಹೆಮ್ಮೆಯ ಸಂಗತಿ

ಡಾ.ಜಿ.ಪರಮೇಶ್ವರ

ಕುಲಾಧಿಪತಿಗಳು, ಸಾಹೇ ವಿಶ್ವವಿದ್ಯಾಲಯ



ಸೃಷ್ಟಿಸಲು ಬದ್ಧವಾಗಿದೆ. ಮೂಲಸೌಕರ್ಯ, ಶೈಕ್ಷಣಿಕ ಚಟುವಟಿಕೆಗಳು ಮತ್ತು ವಿದ್ಯಾರ್ಥಿಗಳ ಅಭಿವೃದ್ಧಿಯನ್ನು ಬಲಪಡಿಸುವತ್ತ ಅನೇಕ ಪ್ರಯೋಗಗಳು ಸಾಗಿವೆ. ಪರಿಣಾಮಕಾರಿ ಬೋಧನೆ, ಮಾರ್ಗದರ್ಶನ ಮತ್ತು ಶೈಕ್ಷಣಿಕ ಮಾರ್ಗದರ್ಶನದ ಮೂಲಕ ವಿದ್ಯಾರ್ಥಿಗಳನ್ನು ಬೆಂಬಲಿಸುವ ಅಧ್ಯಾಪಕರ ಸಮರ್ಪಿತ ತಂಡವನ್ನು ಹೊಂದಿದೆ. ಬೋಧನೆ, ಕಲಿಕೆ ಮತ್ತು ಸಂಶೋಧನಾ ಚಟುವಟಿಕೆಗಳನ್ನು ಬೆಂಬಲಿಸಲು ಹಾಲೀಸು ಆಧುನಿಕ ತರಗತಿ ಕೊಠಡಿಗಳು, ಸುಸಜ್ಜಿತ ಪ್ರಯೋಗಾಲಯಗಳು, ಗ್ರಂಥಾಲಯ ಮತ್ತು ಡಿಜಿಟಲ್ ಕಲಿಕಾ ಸೌಲಭ್ಯಗಳನ್ನು ಒದಗಿಸುತ್ತದೆ. ತಾಂತ್ರಿಕ ಕಾರ್ಯಕ್ರಮಗಳು, ವಿಚಾರ ಸಂಕಿರಣಗಳು, ಕಾರ್ಯಾಗಾರಗಳು, ಪ್ರಾಜೆಕ್ಟ್ ಚಟುವಟಿಕೆಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ವಿವಿಧ ಕ್ರೀಡೆಗಳು ಮತ್ತು ಹವ್ಯಕರ ಚಟುವಟಿಕೆಗಳ ಮೂಲಕ ಸ್ನೇಹಶೀಲತೆ, ನಾಯಕತ್ವ, ಮತ್ತಿತರ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಲು ಪ್ರೋತ್ಸಾಹಿಸಲಾಗುತ್ತಿದೆ.

ಎಂಜಿನಿಯರಿಂಗ್ ವಲಯದಲ್ಲಿ ಬದಲಾಗುತ್ತಿರುವ ಅಗತ್ಯಗಳಿಗೆ ಸಂಬಂಧಿಸಿದ ಕೌಶಲ್ಯಗಳನ್ನು ಕಲಿಸುತ್ತ ಒತ್ತು ನೀಡಲಾಗುತ್ತಿದೆ. ಅಲ್ಲದೆ ಶೈಕ್ಷಣಿಕ ಮತ್ತು ಸಂಶೋಧನಾ ಆಗತ್ಯಗಳನ್ನು ಬೆಂಬಲಿಸುವಲ್ಲಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರ ಕಾರ್ಯನಿರ್ವಹಿಸುತ್ತಿದೆ.

ಗುಣಮಟ್ಟದ ಶಿಕ್ಷಣ, ಆಧುನಿಕ ಮೂಲಸೌಕರ್ಯ, ನಾವೀನ್ಯತೆ, ಸಂಶೋಧನೆ ಮತ್ತು ಒಟ್ಟಾರೆ ವಿದ್ಯಾರ್ಥಿ ಅಭಿವೃದ್ಧಿಯ ಮೇಲೆ ಕೇಂದ್ರೀಕರಿಸಿ, ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ ಬೆಂಬಲಿತ ಕಲಿಕಾ ವಾತಾವರಣವನ್ನು ಸೃಷ್ಟಿಸುವ ಮತ್ತು ಭವಿಷ್ಯದ ಶೈಕ್ಷಣಿಕ ಮತ್ತು ವೃತ್ತಿಪರ ಸವಾಲುಗಳಿಗೆ ಮಹತ್ವಾಕಾಂಕ್ಷೆ ಎಂಜಿನಿಯರ್‌ಗಳನ್ನು ಸಿದ್ಧಪಡಿಸುವತ್ತ ಕೆಲಸ ಮಾಡುವುದನ್ನು ಮುಂದುವರೆಸಿದೆ. ವಿದ್ಯಾರ್ಥಿಗಳಿಗಾಗಿ ಶಿಸ್ತು–ಬದ್ಧ ಯೋಜನಾ ಪ್ರಕ್ರಿಯೆಗಳು: ಪ್ರತಿ ವಿದ್ಯಾರ್ಥಿಗೂ ಒಬ್ಬ ಕೌನ್ಸಿಲರ್ ನೇಮಿಸಿದ್ದು, ವಿದ್ಯಾರ್ಥಿಗಳ ಪ್ರತಿಯೊಂದು ಪ್ರಗತಿಯ ಹಂತಗಳನ್ನು ಗಮನಿಸಿ ಮಾರ್ಗದರ್ಶನ ನೀಡುವ ಪ್ರಕ್ರಿಯೆ ಇದೆ. ಪೋಷಕರು ಕೌನ್ಸಿಲರ್ ಭೇಟಿ ಮಾಡಿ ತಮ್ಮ ಮಕ್ಕಳ ಪ್ರಗತಿಯನ್ನು ತಿಳಿದುಕೊಳ್ಳಬಹುದು. ಪ್ರತಿ ವಿಷಯದಲ್ಲಿಯೂ ಶೇಕಡಾ.85 ಹಾಜರಾತಿ ಕಡ್ಡಾಯವಾಗಿದ್ದು ವಿದ್ಯಾರ್ಥಿ ಮಾಹಿತಿ ವ್ಯವಸ್ಥೆ ಮೂಲಕ ಪ್ರತಿದಿನದ ಹಾಜರಾತಿಯನ್ನು ಸ್ವಯಂಸ್ಪೂರ್ತಿಯ ಅಭ್ಯೋಡ್ ಮಾಡಲಾಗುವುದು. ಪೋಷಕರು ನಿಯಮಿತವಾಗಿ ಇದನ್ನು ಪರಿಶೀಲಿಸಬಹುದು(ಗಿ.ಟಿಖಐಐ) ಲಾಗಿನ್ ಐಡಿ ಮತ್ತು ಪಾಸ್ವರ್ಡಗಳನ್ನು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ನೀಡಲಾಗುವುದು. ಅಲ್ಲದೆ, ಮಕ್ಕಳ ಸತತ ಗೈರು ಹಾಜರಾತಿಯನ್ನು ಸಂದೇಶಗಳ ಮೂಲಕ ಗಮನಕ್ಕೆ ತರಲಾಗುತ್ತದೆ.

ಮೊದಲಿಕರು ಪರೀಕ್ಷೆ ಮತ್ತು ಎರಡನೇ ಕಿರುಪರೀಕ್ಷೆ ನಡೆಯುವ ಮುನ್ನ ಪೋಷಕರ ಸಭೆಯನ್ನು ಕರೆಯಲಾಗುವುದು. ಸಭೆಯಲ್ಲಿ ಪೋಷಕರು ಭಾಗವಹಿಸಿ ತಮ್ಮ ಮಕ್ಕಳ ಪ್ರಗತಿಯನ್ನು ಪರಿಶೀಲಿಸುವುದಕ್ಕೆ ಅವಕಾಶ ಕಲ್ಪಿಸಲಾಗಿದೆ. ಜೊತೆಗೆ ಮಧ್ಯಂತರ ಪರೀಕ್ಷೆಯ ನಂತರ ಪೋಷಕರಿಗೆ ವಿದ್ಯಾರ್ಥಿಗಳ ಬೆಳವಣಿಗೆಯನ್ನು ತಿಳಿಸಲಾಗುತ್ತದೆ.

ಉದ್ಯೋಗ ನೇಮಕಾತಿ: ಪ್ರತಿ ಸೆಮಿಸ್ಟರ್ ಕೊನೆಯಲ್ಲಿ ಕ್ಯಾಂಪಸ್ ನೇಮಕಾತಿಗೆ ಉದ್ಯೋಗಾವಕಾಶ ತರಬೇತಿ ಹಾಗೂ ಶಿಕ್ಷಣಾಧಿಕಾರಿಯ ಶೈಕ್ಷಣಿಕವಾಗಿ ಕೆಲವು ಕೈಗಾರಿಕಾ ಸಂಸ್ಥೆಗಳಿಗೆ ಭೇಟಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಉನ್ನತ ಶಿಕ್ಷಣ ನೀಡುವ ಜೊತೆಗೆ ವಿದ್ಯಾರ್ಥಿಗಳಲ್ಲಿ ಭವಿಷ್ಯ ರೂಪಿಸಿಕೊಳ್ಳಲು ಬೇಕಾದ ಕೌಶಲ್ಯ ಒದಗಿಸಬೇಕು. ಈ ನಿಟ್ಟಿನಲ್ಲಿ ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿಗಳಿಗೆ ಉತ್ತಮ ಉದ್ಯೋಗಾವಕಾಶ ಒದಗಿಸಿ ಸುಂದರ ಭವಿಷ್ಯ ರೂಪಿಸಿಕೊಳ್ಳಲು ನೆರವಾಗಿದೆ. ವಿದ್ಯಾರ್ಥಿವೇತನ ಮತ್ತು ವಿದ್ಯಾರ್ಥಿ ಕಲ್ಯಾಣ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯೊಂದಿಗೆ ಅವರ ಆರ್ಥಿಕ ಸಬಲೀಕರಣಕ್ಕೂ ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ ವಿಶೇಷ ಆದ್ಯತೆ ನೀಡುತ್ತದೆ. ಅರ್ಹ ವಿದ್ಯಾರ್ಥಿಗಳಿಗೆ ಉಳ್ಳವರಿಂದ ವಿವಿಧ ವಿದ್ಯಾರ್ಥಿವೇತನಗಳ ಕುರಿತು ಮಾಹಿತಿ ಹಾಗೂ ಮಾರ್ಗದರ್ಶನ ನೀಡುವ ಮೂಲಕ ಅವರ ಉನ್ನತ ಶಿಕ್ಷಣದ ಕನಸುಗಳನ್ನು ನನಸಾಗಿಸಲು ಸಂಸ್ಥೆ ನೆರವಾಗುತ್ತದೆ.

ವಿದ್ಯಾರ್ಥಿಗಳ ಪ್ರತಿಭೆ, ಪರಿಶ್ರಮ ಮತ್ತು ಸಾಮರ್ಥ್ಯಕ್ಕೆ ಪ್ರೋತ್ಸಾಹ ನೀಡುವುದರ ಜೊತೆಗೆ, ಆರ್ಥಿಕ ಕಾರಣಗಳಿಂದ ಶಿಕ್ಷಣಕ್ಕೆ ಅಡಚಣೆಯಾಗದಂತೆ ಸೂಕ್ತ ಅವಕಾಶಗಳನ್ನು ಕಲ್ಪಿಸುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ.

ಸೋಷಿಯೋಸ್ಟ್ರಕ್ಚರ್ ಬಗ್ಗೆ:

ಕಳೆದ ಎಂಟು ತಿಂಗಳುಗಳಲ್ಲಿ ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಕೈಗೊಂಡ ಅದ್ಭುತ ಪ್ರಯೋಗ ಇದು. ಕಲಿಕೆ, ಸಂಶೋಧನೆ, ಸಮುದಾಯ ಪರಿಹಾರ, ಕಾರ್ಯ ಕ್ಷೇತ್ರ, ತಂಡದ ಕೆಲಸ ಮತ್ತು ನಾವೀನ್ಯತೆಗಳಿಂದ ತುಂಬಿದ ಪ್ರಯಾಣ.

ಈ ವರ್ಷ, 250 ಕ್ಕೂ ಹೆಚ್ಚು ವಿದ್ಯಾರ್ಥಿಗಳು, 40 ಕ್ರಿಯಾತ್ಮಕ ತಂಡಗಳನ್ನು ರಚಿಸಿ, ಒಂದು ಸಾಮಾನ್ಯ ಗುರಿಯೊಂದಿಗೆ ಒಟ್ಟುಗೂಡಿದ್ದಾರೆ – ನೈಜ ಜಗತ್ತಿನ ಸವಾಲುಗಳನ್ನು ಗುರುತಿಸುವುದು ಮತ್ತು ಸಮಾಜದ ಮೇಲೆ ಸಕಾರಾತ್ಮಕ ಪರಿಣಾಮ ಬೀರುವ ಅರ್ಥಪೂರ್ಣ ಪರಿಹಾರಗಳನ್ನು ಅಭಿವೃದ್ಧಿಪಡಿಸುವುದು ಇದರ ಉದ್ದೇಶವಾಗಿದೆ. ವಿದ್ಯಾರ್ಥಿಗಳು 110 ಕ್ಕೂ ಹೆಚ್ಚು ಕ್ಷೇತ್ರಗಳಿಗೆ ಭೇಟಿ ನೀಡಿದ್ದು ಸಮುದಾಯಗಳೊಂದಿಗೆ ಸಂವಹನ ನಡೆಸಿದರು, ಸಮಸ್ಯೆಗಳನ್ನು ಗಮನಿಸಿದರು, ಒಳನೋಟಗಳನ್ನು ಸಂಗ್ರಹಿಸಿದರು ಮತ್ತು ಆ ಅವಲೋಕನಗಳನ್ನು ನವೀನ ಕಾರ್ಯ ಮಾದರಿಗಳಾಗಿ ಪರಿವರ್ತಿಸಿದರು.



ಕ್ಯಾಂಪಸ್‌ನಲ್ಲಿ ಜಾಸ್ತಿವನ್ನು ಅರಸುವ' ಮತ್ತು ಹಂಚಿಕೊಳ್ಳುವ ಪ್ರೇರಣಾದಾಯಕ ವಾತಾವರಣ ಇದೆ. ಸಾಮಾಜಿಕ ಹೊಣೆಗಾರಿಕೆ, ಮಾನವೀಯ ಮೌಲ್ಯಗಳು ಮತ್ತು ಸಾಮಾಜಿಕ ಬದ್ಧತೆಯ ಬಗ್ಗೆ ಆಸಕ್ತಿಯನ್ನು ಉಂಟುಮಾಡುವ ವಾತಾವರಣ ಕಲ್ಪಿಸುವ ಮೂಲಕ ಗುಣಮಟ್ಟದ ತಾಂತ್ರಿಕ ಶಿಕ್ಷಣವನ್ನು ಕಾಲೇಜಿನಲ್ಲಿ ನೀಡಲಾಗುತ್ತಿದೆ.

ಡಾ. ಎಲ್. ಸಂಜೀವ್ ಕುಮಾರ್
ಪ್ರಾಂಶುಪಾಲರು
ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್
ಕ್ಯಾತ್ಸಂದ್ರ, ತುಮಕೂರು.



ಈ ಪ್ರಯಾಣದ ಉದ್ದಕ್ಕೂ ವಿದ್ಯಾರ್ಥಿಗಳು ವಿಮರ್ಶಾತ್ಮಕ ಚಿಂತನೆ, ವಿನ್ಯಾಸದ ಚಿಂತನೆ, ಸಮಸ್ಯೆ ಪರಿಹಾರ, ಸಹಯೋಗ, ಸಂವಹನ ಮತ್ತು ನಾಯಕತ್ವ ಮುಂತಾದ ಅಗತ್ಯ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿದ್ದಾರೆ. ಸವಾಲುಗಳನ್ನು ಗುರುತಿಸುವುದು ಮತ್ತು ಮೂಲ ಕಾರಣಗಳನ್ನು ವಿಶ್ಲೇಷಿಸುವುದು, ಪರಿಹಾರಗಳನ್ನು ಹುಡುಕುವುದು, ಮೂಲಮಾದರಿ ಕಲ್ಪನೆಗಳು ಮತ್ತು ಪರಿಕಲ್ಪನೆಗಳನ್ನು ಕ್ರಿಯಾತ್ಮಕ ಕಾರ್ಯ ಮಾದರಿಗಳಾಗಿ ಪರಿವರ್ತಿಸುವುದು ಹೇಗೆ ಎಂಬುದನ್ನು ವಿದ್ಯಾರ್ಥಿಗಳು ಕಲಿತಿದ್ದಾರೆ. **RezonX - Aspirations Resonate Execution RezonX** ವಿದ್ಯಾರ್ಥಿ-ಚಾಲಿತ ಕ್ಲಬ್ ಆಗಿದ್ದು ಇದು ವಿದ್ಯಾರ್ಥಿಗಳು ಕಲಿಯಲು, ಅನ್ವೇಷಿಸಲು, ನಾವೀನ್ಯತೆ ನೀಡಲು ಮತ್ತು ಅವರ ಪ್ರತಿಭೆಯನ್ನು ಪ್ರದರ್ಶಿಸಲು ವೇದಿಕೆಯನ್ನು ಒದಗಿಸುತ್ತದೆ. ಕ್ಲಬ್ ವಿದ್ಯಾರ್ಥಿಗಳು ವಿವಿಧ ಚಟುವಟಿಕೆಗಳು, ಕಾರ್ಯಕ್ರಮಗಳು, ಸ್ಪರ್ಧೆಗಳು ಮತ್ತು ಯೋಜನೆಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸುತ್ತದೆ.

ಒಡಂಬಡಿಕೆ :(MoU)

ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ ರಾಷ್ಟ್ರದ ಅನೇಕ ಕಂಪನಿಗಳ ಜೊತೆ ಪರಸ್ಪರ (ಒಡಂ) ಒಡಂಬಡಿಕೆ ಮಾಡಿಕೊಂಡು, ವಿದ್ಯಾರ್ಥಿಗಳಿಗೆ ಪ್ರಾಜೆಕ್ಟ್‌ಗಳ ಬಗ್ಗೆ ತರಬೇತಿ, ಉದ್ಯೋಗ ತರಬೇತಿ, ನೇರಾಂಶಿ ಮತ್ತು ವಿದೇಶದಲ್ಲಿ ಉನ್ನತ ವ್ಯಾಸಂಗಕ್ಕೆ ಅವಕಾಶ ಕಲ್ಪಿಸಲಾಗಿದೆ.

ಶಿಕ್ಷಣಿಕ ಗುಣಮಟ್ಟ ಹೆಚ್ಚಳ, ಕೌಶಲ್ಯ ಅಭಿವೃದ್ಧಿ ಸೇರಿದಂತೆ ಹಲವು ಕ್ಷೇತ್ರದಲ್ಲಿ ವಿದ್ಯಾರ್ಥಿಗಳನ್ನು ತರಬೇತಿಗೊಳಿಸಲು ಈ ಪರಸ್ಪರ ಲಿಖಿತ ಒಪ್ಪಂದಗಳನ್ನು ಮಾಡಿಕೊಳ್ಳಲಾಗುತ್ತದೆ. ವಿದ್ಯಾರ್ಥಿಗಳು 15+ತಾಂತ್ರಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದಾರೆ.

ಸೃಜನಶೀಲತೆಯನ್ನು ಉತ್ತೇಜಿಸುವುದು ಅಧ್ಯಯನದ ಹೊಸ ಸಾಧ್ಯತೆ. ಪ್ರಸ್ತುತ ಹಾಗೂ ಭವಿಷ್ಯದ ಸಮಸ್ಯೆಗಳಿಗೆ ಕ್ರಿಯಾತ್ಮಕ ಚಿಂತನೆಯ ಮೂಲಕವೇ ಪರಿಣಾಮಕಾರಿ ಪರಿಹಾರಗಳನ್ನು ಕಂಡುಕೊಳ್ಳಬಹುದು. ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್‌ನಲ್ಲಿ ವ್ಯಕ್ತಿತ್ವವನ್ನು ನಿರ್ಮಿಸಲು, ಮನಸ್ಸನ್ನು ಬಲಪಡಿಸಲು, ಬುದ್ಧಿಯನ್ನು ವಿಸ್ತರಿಸಲು ಹಾಗೂ ಸಮಸ್ಯೆಗಳನ್ನು ಹೊಸ ದೃಷ್ಟಿಕೋನದಿಂದ ನೋಡುವ ಸಂಸ್ಕೃತಿಯನ್ನು ಬೆಳೆಸಲು ಮುಂದಾಗಿದೆ.

–ಭಾಗ್ಯ ಎಚ್ ಎಸ್
ಗ್ರಂಥಪಾಲಕರು, ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ ಕಾಲೇಜು, ಕ್ಯಾತ್ಸಂದ್ರ, ತುಮಕೂರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಶ್ರೀ ಕೃಷ್ಣನಲ್ಲಿರುವ ಎಲ್ಲಾ ಗುಣಗಳು ಅವನ ಹೆಸರಿನಲ್ಲಿವೆ ಶ್ರೀಕೃಷ್ಣ ಜಯಂತಿ ಮಹತ್ವ ಮತ್ತು ಆಚರಣೆ

ಕೃಷ್ಣ ಜನ್ಮಾಷ್ಟಮಿ (ಕೃಷ್ಣಾಷ್ಟಮಿ, ಸಾಯಂ ಆಷ್ಟಂ, ಗೋಕುಲಾಷ್ಟಮಿ, ಅಷ್ಟಮಿ ರೋಹಿಣಿ, ಶ್ರೀಕೃಷ್ಣ ಜಯಂತಿ, ಶ್ರೀ ಜಯಂತಿ, ಜನ್ಮಾಷ್ಟಮಿ) ವಿಷ್ಣುನಿ ಎಂಟನೇ ಅವತಾರವಾದ ಕೃಷ್ಣನ ಜನ್ಮದಿನ ಆಚರಿಸುವ ಪ್ರಮುಖ ಹಿಂದೂ ಹಬ್ಬಗಳಲ್ಲಿ ಒಂದಾಗಿದೆ. ಇದನ್ನು ಹಿಂದೂ ತಿಂಗಳ ಭದ್ರವ ಎಂಟನೇ ದಿನದಂದು ಆಚರಿಸಲಾಗುವುದೆ, ಇದು ಸಾಮಾನ್ಯವಾಗಿ ಆಗಸ್ಟ್ ಅಥವಾ ಸೆಪ್ಟೆಂಬರ್‌ನಲ್ಲಿ ಇರುತ್ತದೆ.

ಜನ್ಮಾಷ್ಟಮಿ ಸಾರ್ವಜನಿಕ ರಜಾದಿನವೇ?

ಜನ್ಮಾಷ್ಟಮಿ ಸಾರ್ವಜನಿಕ ರಜಾದಿನವಾಗಿದೆ. ಇದು ಸಾಮಾನ್ಯ ಜನರಿಗೆ ರಜೆ ದಿನವಾಗಿದ್ದು, ಶಾಲೆಗಳು ಮತ್ತು ಹೆಚ್ಚಿನ ವ್ಯವಹಾರಗಳು ಮುಚ್ಚಲ್ಪಟ್ಟಿರುತ್ತವೆ. ಕೃಷ್ಣ ತತ್ವದಿಂದ ಹೆಚ್ಚಿನ ಪ್ರಯೋಜನ ಪಡೆಯಲು ಶ್ರೀ ಕೃಷ್ಣ ಜಪ. ಜನ್ಮಾಷ್ಟಮಿಯು (ಗೋಕುಲಾಷ್ಟಮಿ) ಎಂದೂ ಕರೆಯಲ್ಪಡುವುದರ ಈ ದಿನದಂದು, ಶ್ರೀ ಕೃಷ್ಣನ ತತ್ವವು ಇತರ ದಿನಗಳಿಗಿಂತ ಸಾಪಿರ ಪಟ್ಟು ಹೆಚ್ಚು ಸಕ್ರಿಯವಾಗಿರುತ್ತದೆ. ಈ ದಿನದಂದು, ಓಂ ನಮೋ ಭಗವತೇ ವಾಸುದೇವಾಯ ಎಂದು ಜಪಿಸುವುದರಿಂದ ಮತ್ತು ಶ್ರೀ ಕೃಷ್ಣನನ್ನು ಭಾವದಿಂದ ಪೂಜಿಸುವುದರಿಂದ ಅವನ ತತ್ವದ ಗರಿಷ್ಠ ಪ್ರಯೋಜನವನ್ನು ಪಡೆಯಲು ಸಹಾಯವಾಗುತ್ತದೆ. ದೇವರು ಮತ್ತು ಅವನ ಹೆಸರು ಒಂದೇ ಆಗಿರುವುದರಿಂದ ಅವನ ನಾಮ ಜಪವು ಅವನ ಉಪಸ್ಥಿತಿಯನ್ನು ತಕ್ಷಣಕ್ಕೆ ಆಹ್ವಾನಿಸುತ್ತದೆ. ಶ್ರೀ ಕೃಷ್ಣನಲ್ಲಿರುವ ಎಲ್ಲಾ ಗುಣಗಳು ಅವನ ಹೆಸರಿನಲ್ಲಿವೆ. ಹೀಗಾಗಿ, ಅವನ ಹೆಸರನ್ನು ಪುನರಾವರ್ತಿಸುವುದರಿಂದ ಜ

ಬಿಡದಿ ಟೌನ್‌ಶಿಪ್, ಬರ ಸಮಸ್ಯೆ ಚರ್ಚೆಗೆ ವಿಶೇಷ ಅಧಿವೇಶನ ನಡೆಸಲಿ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ಬರ ಸಮಸ್ಯೆ ಕುರಿತು ಚರ್ಚಿಸಲು ಸರ್ಕಾರ ವಿಶೇಷ ಅಧಿವೇಶನ ಕರೆಯಬೇಕು. ಈ ಅಧಿವೇಶನದಲ್ಲಿ ಕೇವಲ ರಾಜ್ಯದಲ್ಲಿನ ಬರ ಪರಿಸ್ಥಿತಿ ಕುರಿತು ಹಾಗೂ ಬಿಡದಿ ಟೌನ್‌ಶಿಪ್ ಯೋಜನೆ ಕುರಿತು ಮಾತ್ರ ಚರ್ಚೆ ನಡೆಸಬೇಕು ಎಂದು ರೈತ ಮುಖಂಡ ಕುಮಾರಸ್ವಾಮಿ ಆಗ್ರಹಿಸಿದರು.

ನಗರದ ಎಪಿಎಂಸಿ ಮಾರುಕಟ್ಟೆ ಆವರಣದಲ್ಲಿ ಆಯೋಜಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬರ ಅಧ್ಯಯನ ಕುರಿತು ಮಾಹಿತಿ ಕಲೆ ಹಾಕಲಿ ಎಂದರು. ಜೊತೆಗೆ, ಚರ್ಚೆ ನಡೆಸಲು ವಿಶೇಷ ಅಧಿವೇಶನ ಕರೆಯಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಕೇವಲ ಎರಡು ತಾಲ್ಲೂಕುಗಳನ್ನು ಬರ ಪೀಡಿತ ಎಂಬುದಾಗಿ ಘೋಷಣೆ ಮಾಡಲಾಗಿದೆ. ಆದರೆ, ಬಹಳ ಉಳಿದ ಮೂರು ತಾಲ್ಲೂಕಿನಲ್ಲಿಯೂ ಬರ ಪರಿಸ್ಥಿತಿ ಎದುರಾಗಿದೆ. ಈ ಬಗ್ಗೆ ಜಿಲ್ಲಾಡಳಿತ ಹಾಗೂ ಸರ್ಕಾರ ಕೂಡಲೇ ಗಮನಹರಿಸಿ ಬಾಕಿ ಉಳಿದ ತಾಲ್ಲೂಕುಗಳನ್ನು ಬರ ಪೀಡಿತ ಎಂಬುದಾಗಿ ಘೋಷಣೆ ಮಾಡಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಅನಿವಾರ್ಯ ಎಂದರು.

ಡಿಸಿ ರ್ನಲ್ ಕ್ಷ್: ಜಿಲ್ಲೆಯಲ್ಲಿ ಬರ ಪರಿಶೀಲನೆ ಮಾಡದೆ ಕೇವಲ ಎರಡು ತಾಲ್ಲೂಕುಗಳನ್ನು ಬರ ಪೀಡಿತ ಎಂಬುದಾಗಿ ಘೋಷಣೆ ಮಾಡಿದ್ದಾರೆ. ಜಿಲ್ಲಾಧಿಕಾರಿ ಕ್ಷೇತ್ರ ಕಾರ್ಯಕ್ಕೆ ತೆರಳಿ ದ್ದೇ ಕಚೇರಿಯಲ್ಲಿಯೇ ಕುಳಿತುಕೊಂಡು ಕೆಲಸ ನಿರ್ವಹಣೆ ಮಾಡುತ್ತಿದ್ದಾರೆ. ಇದರಿಂದಾಗಿ ಜಿಲ್ಲೆಯ ಕೇವಲ ಎರಡು ತಾಲ್ಲೂಕುಗಳು ಮಾತ್ರ ಬರ ಪೀಡಿತ ಎಂಬುದಾಗಿ ಘೋಷಣೆಯಾಗಿದೆ. ಜಿಲ್ಲಾಧಿಕಾರಿ ಯಶವಂತ ವಿ.ಗುರುಕರ್ ಅವರ ಬೇಜಾವಾಬ್ದಾರಿಯಿಂದ ಮೂರು ತಾಲ್ಲೂಕುಗಳು ಬರ



ಪೀಡಿತ ಪ್ರದೇಶದಿಂದ ಹೊರಗುಳಿದಿದೆ. ಇದಕ್ಕೆ ಡಿಸಿ ಅವರೇ ನೇರ ಹೊಣೆಯಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಯಾವ ರೀತಿ ಮಾಹಿತಿ ಇನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಬರ ಪೀಡಿತವಾಗಿದೆ. ಹಾಗಾಗಿ ಚನ್ನಪಟ್ಟಣ, ಕನಕಪುರ ಹಾಗೂ ಹಾರೋಹಳ್ಳಿ ತಾಲ್ಲೂಕುಗಳನ್ನು ಬರ ಪೀಡಿತ ತಾಲ್ಲೂಕು ಎಂಬುದಾಗಿ ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು.

ಬರ ಪೀಡಿತ ತಾಲ್ಲೂಕುಗಳಿಗೆ ರಾಜ್ಯ ಸರ್ಕಾರ ಬರ ಪರಿಹಾರ ಘೋಷಣೆ ಮಾಡಬೇಕು. ಈ ಹಣವೂ ನೇರವಾಗಿ ರೈತ ಖಾತೆ ಜಮಾ ಆಗುವಂತೆ ನೋಡಿಕೊಳ್ಳಬೇಕು. ಬರ ಘೋಷಣೆ ಮಾಡಿದರೆ, ಅಧಿಕಾರಿಗಳಿಗೆ ಲಾಭವಾಗುತ್ತದೆ. ಎಕರೆಗೆ ಕನಿಷ್ಠ 15ಸಾವಿರ ಹಣ ನೀಡಬೇಕು. ಜೊತೆಗೆ, ಬಾಕಿ ಉಳಿದ ಎಲ್ಲಾ ತಾಲ್ಲೂಕುಗಳನ್ನು ಬರ ಪೀಡಿತ ಎಂಬುದಾಗಿ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಅಧಿಕಾರಿಗಳ ಹಾವಳಿ ಹೆಚ್ಚಾಗಿದೆ. ಇದಕ್ಕೆ ಕಡಿವಾಣ ಹಾಕಬೇಕು. ಜಿಲ್ಲಾಧಿಕಾರಿ ಜಿಲ್ಲೆಗೆ ಆಗಮಿಸಿ 3 ವರ್ಷ ಆಯಿತು. ಜೊತೆಗೆ, ವಾಗಾವಣೆ ಆದರೂ, ಜಿಲ್ಲೆಯನ್ನು ಬಿಡಲು ಮನಸ್ಸು ಮಾಡಿಲ್ಲ. ರಾಜ್ಯ ಸರ್ಕಾರ ಬಿಡದಿಯಲ್ಲಿ ಎಐ ಸಿಟಿ ಮಾಡುತ್ತಿದೆ. ಇದಕ್ಕಾಗಿಯೇ ಅವರನ್ನು ಉಳಿಸಿಕೊಂಡಿದೆ ಎಂದು ಕಿಡಿಕಾರಿದರು.

ಈ ವೇಳೆ ರೈತ ಸಂಘದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಹಾಜರಿದ್ದರು.

ಮಕ್ಕಳು ಟಿ.ವಿ. ಮತ್ತು ಮೊಬೈಲ್‌ಗಳ ವ್ಯಾಮೋಹಕ್ಕೆ ಒಳಗಾಗದೆ ತಮ್ಮ ಭವಿಷ್ಯವನ್ನು ಹಾಳು ಮಾಡಿಕೊಳ್ಳಬೇಡಿ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ: ವಿದ್ಯಾರ್ಥಿಗಳು ಕೇವಲ ಓದುವುದರ ಬಗ್ಗೆ ಮಾತ್ರ ಗಮನಹರಿಸದೆ ಪಠ್ಯೇತರ ಚಟುವಟಿಕೆಗಳಲ್ಲಿ ಉತ್ಸಾಹದಿಂದ ಭಾಗವಹಿಸಿ ಸರ್ವತೋಮುಖ ಬೆಳವಣಿಗೆ ಸಾಧಿಸಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಒ ಕೆ.ಹೇಮಾ ಅವರು ಕಿವಿಮಾತು ಹೇಳಿದರು.

ಅವರು ಇಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್, ಜಿಲ್ಲಾ ಆಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಮಕ್ಕಳ ಸಂಸತ್ತಿನ ಅಧಿವೇಶನದಲ್ಲಿ ಮಾತನಾಡಿದರು.

ಮಕ್ಕಳು ಮೊಬೈಲ್ ಮತ್ತು ಟಿವಿಗಳಿಗೆ ಅಂಟಿಕೊಂಡಿರುವುದರಿಂದ ಅವರಲ್ಲಿ ಸೃಜನಶೀಲತೆ ಕಡಿಮೆಯಾಗುತ್ತಿದೆ. ಇದರಿಂದ ಅವರ ಭವಿಷ್ಯಕ್ಕೆ ಮಾರಕವಾಗಲಿದೆ. ಹಾಗಾಗಿ ಮಕ್ಕಳು ಮೊಬೈಲ್ ಮತ್ತು ಟಿವಿಗಳಿಂದ ದೂರವಿರಬೇಕು. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ ಸರ್ವತೋಮುಖ ಬೆಳವಣಿಗೆ ಸಾಧಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಪಂಚಾಯತ್ ಸಿಇಒ ಕೆ.ಹೇಮಾ ಅವರು ಮಾತನಾಡಿ, ಮಕ್ಕಳು ಚೆನ್ನಾಗಿ ಓದಿ ಉತ್ತಮ ಅಂಕಗಳಿಸಿ ಉತ್ತಮ ಉದ್ಯೋಗ ಪಡೆಯುವುದಷ್ಟೇ ಜೀವನದ ಗುರಿ ಎಂದು ಭಾವಿಸದೆ ಸಾಮಾಜಿಕ ಕಳಕಳಿಯ ಭಾವನೆ ಹೊಂದಬೇಕು ಎಂದು ಗಿರಿಕಾನನ ಬುಡಕಟ್ಟು ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಇರುಳಿಗ ಕೃಷ್ಣಮೂರ್ತಿ ತಿಳಿಸಿದರು.

ರಾಮನಗರ ತಾಲ್ಲೂಕಿನ ಕೂಟಗಲ್ ಹೋಬಳಿಯ ಯರೇಹಳ್ಳಿ ಇರುಳಿಗರ ದೊಡ್ಡಿ ಕೂಟಗಲ್ ಸರ್ಕಾರಿ ಶಾಲಾ ಮಕ್ಕಳಿಗೆ ಗಿರಿಕಾನನ ಬುಡಕಟ್ಟು ಅಭಿವೃದ್ಧಿ ಟ್ರಸ್ಟ್, ನ್ಯೂ ಚಿಗರೂರು ಚಾರಿಟಬಲ್ ಟ್ರಸ್ಟ್ ಮತ್ತು ರಾಜ್ಯ ರೈತ ಸಂಘ, ವತಿಯಿಂದ ಬುಧವಾರ ಆರೆಮ್ ಬರೋ ಸೈನ್ಸ್ ಕಂಪನಿ ಸಹಯೋಗದಲ್ಲಿ ನೋಟ್ ಪುಸ್ತಕ, ಬ್ಯಾಗ್ ವಿತರಣೆ ಮಾಡಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಸ್ತು, ಏಕಾಗ್ರತೆಯನ್ನು ಬೆಳೆಸಿಕೊಳ್ಳುವುದರ ಮೂಲಕ ಹಿರಿಯರ ವಿಶ್ವಾಸಗಳನ್ನು ಹುಸಿಗೊಳಿಸದೆ ಅರ್ಥ ಮಾಡಿಕೊಂಡು ಶಿಕ್ಷಕರು ಹೇಳಿಕೊಟ್ಟ ಪಾಠಗಳನ್ನು ಅರ್ಥ ಮಾಡಿಕೊಂಡು ಶಿಕ್ಷಕರು ಹೇಳಿಕೊಟ್ಟ ಪಾಠಗಳನ್ನು ಅರ್ಥ ಮಾಡಿಕೊಂಡು ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿ ತಮ್ಮ ಜ್ಞಾನ ಬೆಳೆಸಿಕೊಳ್ಳಬೇಕು ಸರ್ಕಾರಿ ಶಾಲೆ ಎಂಬ ಕೀಳರಿಮೆ ತೊಡದೆ ಹಾಕಿ ಓದಿನಲ್ಲಿ ಪೈಪೋಟಿ ನೀಡಿ ಮುಂದೆ ಬಂದು ಗ್ರಾಮಕ್ಕೆ ದೇಶಕ್ಕೆ ತಮ್ಮ ಹೆತ್ತ ತಂದೆ ತಾಯಿಗಳಿಗೆ ಕೀರ್ತಿ ತರಬೇಕು ಎಂದರು.

ರೈತ ಸಂಘದ ನಲ್ಲಹಳ್ಳಿ ಶ್ರೀನಿವಾಸ್ ಮಾತನಾಡಿ ಶಿಕ್ಷಣ ಸಮಾಜ ಕಟ್ಟುವ ಒಂದು ರೀತಿಯ ಕೃಷಿಯಿದ್ದಂತೆ ಇದರಿಂದಲೇ ಮಕ್ಕಳ ಉತ್ತಮ ಭವಿಷ್ಯ ರೂಪುಗೊಳ್ಳುತ್ತದೆ. ಸರ್ಕಾರಿ ಶಾಲಾ ಮಕ್ಕಳ ಬಗ್ಗೆ ಸಂಘ ಸಂಸ್ಥೆಗಳು ಕಾಳಜಿ ತೋರುತ್ತಿವೆ. ಅದರಂತೆ ರಾಜ್ಯ ರೈತ ಸಂಘ, ನ್ಯೂ ಚಿಗರೂರು ಚಾರಿಟಬಲ್ ಟ್ರಸ್ಟ್ ಮತ್ತು ಗಿರಿಕಾನನ ಬುಡಕಟ್ಟು ಅಭಿವೃದ್ಧಿ ಟ್ರಸ್ಟ್ ವತಿಯಿಂದ ಶಿಕ್ಷಕರಾದ ಗಿರೀಶ್, ಮಂಜುಳಾ, ನರಸಿಂಹಮೂರ್ತಿ ಇದ್ದರು.

ಮಾಜಿ ಶಾಸಕ ಎ.ಮಂಜುನಾಥ್ ವಿರುದ್ಧ ಕಾಂಗ್ರೆಸ್ ಮುಖಂಡರ ವಾಗ್ದಾಳಿ

ಸೂರ್ಯಪ್ರಗತಿನ್ಯೂಸ್.ಕಾಂ



ಬಿಡದಿ: ಮಾಜಿ ಶಾಸಕ ಎ.ಮಂಜುನಾಥ್ ತಮ್ಮ ಇತಿಮಿತಿಯಲ್ಲಿ ಇದ್ದರೆ ಅವರಿಗೆ ಒಳ್ಳೆಯದು. ಸಚಿವ ಎಚ್.ಸಿ.ಬಾಲಕೃಷ್ಣ ಬಗ್ಗೆ ಹಗುರವಾಗಿ ಮಾತನಾಡುವ ಮುನ್ನ ಅವರ ಅವಧಿಯಲ್ಲಿನ ಸಾಧನೆಗಳ ಬಗ್ಗೆ ಹಚ್ಚಿ ಬಿಡುಗಡೆ ಮಾಡಲಿ. ಎಚ್ ಸಿಬಿ ಅವರ ಅಭಿವೃದ್ಧಿ ಕಾರ್ಯಗಳ ಬಗ್ಗೆ ನಾವೇ ಹಚ್ಚಿ ಬಿಡುಗಡೆಗೊಳಿಸುತ್ತೇವೆ. ಬಿಡದಿ ಬಿಜೆಪಿ ಸರ್ಕಲ್ ಬಹಿರಂಗ ಚರ್ಚೆಗೆ ಬರಲಿ ಎಂದು ಜೆಡಿಯು ಅಧ್ಯಕ್ಷ ಗಾಣಕಲ್ ನಟರಾಜ್ ಸವಾಲು ಹಾಕಿದರು.

ಬಾಕಿ ರೆಸಾರ್ಟ್‌ನಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಾಜಿ ಶಾಸಕ ಎ.ಮಂಜುನಾಥ್ ವಿರುದ್ಧ ವಿಕಪಕಸನದಲ್ಲೇ ವಾಗ್ದಾಳಿ ನಡೆಸಿದರು. ಬಾಲಕೃಷ್ಣ ಕುಟುಂಬದ ಹೆಸರು ಹಾಕಿಕೊಂಡರೆ ತಪ್ಪೇನಿದೆ. ಬೇಕಿದ್ದರೆ ಮಂಜುನಾಥ್ ಕೂಡ ಕುಟುಂಬದ ಹೆಸರು ಹಾಕಿಕೊಳ್ಳಲಿ. ಬಾಲಕೃಷ್ಣ ಅವರ ಕುಟುಂಬದ ಬಗ್ಗೆ ಮಾತನಾಡುವ ಮುನ್ನ ಎಚ್ಚರಿಕೆಯಿಂದ ಮಾತನಾಡಿ. ಅವರ ತಂದೆ ಮಾಜಿ ಸಚಿವರಾಗಿದ್ದವರು, ಸುದೀರ್ಘ 32 ವರ್ಷಗಳ ರಾಜಕೀಯ ಜೀವನ ಬಾಲಕೃಷ್ಣರದ್ದು. ಅವರ ಅಭಿವೃದ್ಧಿ ಕಾರ್ಯಗಳ ಬಗ್ಗೆ ಹಚ್ಚಿ ನಾವೇ ನೀಡುತ್ತೇವೆ. ವೈಯಕ್ತಿಕ ತೇಜೋವಧೆಯಾಗಿ ಕೀಳುವಟ್ಟದ ಹೇಳಿಕೆ ಮುಂದುವರಿದರೆ ಎಂ.ಎ ಜ ನಾಥ್ ಕರ್ಮಕಾಂಡಗಳನ್ನು ಬಿಚ್ಚಿಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮಾಜಿ ಶಾಸಕರು 5 ವರ್ಷ ಅಧಿಕಾರದಲ್ಲಿದ್ದಾಗ ಬಿಡದಿ ಅಭಿವೃದ್ಧಿಗೆ ಅವರ ಕೊಡುಗೆ ಶೂನ್ಯ. ಬಿಡದಿ ಹ್ಟಣದಲ್ಲಿ 25 ಕೋಟಿ ಮೆಚ್ಚುದಲ್ಲಿ ನಲ್ಲಿಗುಡ್ಡೆಕೆರೆಅಭಿವೃದ್ಧಿ, ಹಚ್ಚಿಣದಲ್ಲಿಕ್ರೀಡಾಂಗಣ ನಿರ್ಮಾಣ ಮಾಡುವ ನಿಟ್ಟಿನಲ್ಲಿ 270 ಕೋಟಿ ಮೆಚ್ಚುದಲ್ಲಿ ಸಿಸಿ ಆರ್ ಅಡಿಯಲ್ಲಿ ಸುಸಜ್ಜಿತ ಕ್ರೀಡಾಂಗಣಕ್ಕೆ ಸಿಎಂ ಡಿ.ಕೆ.ಶಿವಕುಮಾರ್ ಅವರು ಶಂಕುಸ್ಥಾಪನೆ ಮಾಡಲಿದ್ದಾರೆ. ಆದರೆ ಮಾಜಿ ಶಾಸಕರಿಗೆ ಬಿಜೆಪಿ ಸರ್ಕಲ್ ನಿಂದ ಅವರ ಮನೆಯವರೆಗೆ ರಸ್ತೆಮಾಡಿಕೊಳ್ಳಲು ಆಗಿರಲಿಲ್ಲ ಈ ರಸ್ತೆ ಮಾಡಿಸಲು ನಮ್ಮ ಬಾಲಕೃಷ್ಣ ಅವರು ಬರಬೇಕಾಯ್ತು ಎಂದು ವ್ಯಂಗ್ಯವಾಡಿದರು.

ಈಗಾಗಲೇ ಈ ಭಾಗದ ಹಲವು ಗ್ರಾಮಗಳಲ್ಲಿ ವಿವಿಧ ಅ ಬಿ, ವೃದ್ಧಿ ಕಾಮಗಾರಿಗಳಿಗೆ ಶ್ರಾರಂಭ' ವಾಗಿವೆ. ಅದರಲ್ಲಿ ಪ್ರಮುಖವಾಗಿ ರಸ್ತೆಗಳ ಅಭಿವೃದ್ಧಿ ಕೆಲಸ ನಡೆಯುತ್ತಿದೆ. ಹಚ್ಚಿನ ವ್ಯಾಪ್ತಿಯಲ್ಲಿ ಎಲ್ಲಾ ಮಹನೀಯರ ಪ್ರತಿಮೆಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ, ಕೆಂಪೇಗೌಡರ ಪ್ರತಿಮೆ, ಸಂಗೊಳ್ಳಿ ರಾಯಣ್ಣ, ಅಂಬೇಡ್ಕರ್ ಸೇರಿದಂತೆ ಇನ್ನೂ ಹಲವು ಮಹನೀಯರುಗಳ ಪತ್ರಿಮೆ ನಿರ್ಮಾಣ ಕಾರ್ಯಗಳು ಪ್ರಗತಿಯಲ್ಲಿವೆ. ಇಷ್ಟೆಲ್ಲಾ ಅಭಿವೃದ್ಧಿ ಕೆಲಸಗಳು ಆಗುತ್ತಿದ್ದರೂ ಇದನ್ನು ಸಹಿಸಿಕೊಳ್ಳಲಾಗದೆ ಮಾಜಿ ಶಾಸಕರು ಅಭಿವೃದ್ಧಿ ಕೆಲಸಗಳಿಗೆ ಅಡ್ಡಗಾಲು ಹಾಕುತ್ತಿದ್ದಾರೆ. ಇದು ಸರಿಯಲ್ಲ. ಇದರಿಂದ ಅವರ ಘನತೆಯೂ ಕಡಿಮೆಯಾಗುತ್ತದೆ ಎಂದು ಎಚ್ಚರಿಸಿದರು.


ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಎಲ್ ಚಿಂದ್ರಶೇಖರ್ ಮಾತನಾಡಿ ಮಾಜಿ ಶಾಸಕರಿಗೆ ಇರುವ ಗೌರವವನ್ನು ಅವರೆ ಕಳೆದುಕೊಳ್ಳುತ್ತಿದ್ದಾರೆ ಸುದ್ದಿಗೋಷ್ಠಿ ನಡೆಸಿ ಮಾತನಾಡುವ ಭಾಷಣ ಅವರದ್ದು, ಅವರ ರಾಜಕೀಯ ಪ್ರಾರಂಭವಾಗಿದ್ದು ಇದೇ ಕಾಂಗ್ರೆಸ್ ಪಕ್ಷದಿಂದ ಇದನ್ನು ಅವರು ಆತ್ಮ ಸಾಕ್ಷಿಯಾಗಿ ಒಪ್ಪಿಕೊಳ್ಳಲಿ. ನಾನು ಜಿ.ಪಂ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದ್ದ ಸಂದರ್ಭದಲ್ಲಿ ನನ್ನ ಸೋಲಿಗೆ ಇವರೆ ಕಾರಣಕರ್ತರಾಗಿದ್ದರು. ದೇವೇಗೌಡರ ಗಲುಬಿಗಾಗಿ ಅಂದು ಬಾಲಕೃಷ್ಣ ಅವರು ಬಿಜೆಪಿ ಪಕ್ಷ ಬಿಟ್ಟು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದರು ಎಂದರು.

ಪ್ರಶ್ನೆ ಬ್ಂ ವಿರೋಧ ಪಕ್ಷದ ನಾಯಕರಾದ ಸಿ.ಎಂ.ಇ ಶ್ ಮಾತನಾಡಿದ ರಾಜಕೀಯ ಹತಾಶೆ ಯಿಂದ ಮಾತನಾಡುವುದನ್ನು ಮಂಜುನಾಥ್ ಬಿಡಬೇಕು. ರಿಯಲ್ ಎಸ್ಟೇಟ್ ಮಾಡುತ್ತಿದ್ದ ನೀವು ಅಲ್ಲಿ ದೋಖಾ ಮಾಡಿ ಹಣ ಮಾಡಿದ್ದೀರಿ. ಕುಮಾರಸ್ವಾಮಿ ಅವರು ಸಿಎಂ ಆಗಿದ್ದರು ಕೂಡ ಯಾವುದೇ ಅಭಿವೃದ್ಧಿ ಕಂಡಿರಲಿಲ್ಲ ಇದೀಗ ಡಿ.ಕೆ.ಶಿವಕುಮಾರ್ ಅವರು ಸಿಎಂ ಆದ ನಂತರ ಅಭಿವೃದ್ಧಿ ಹರ್ ಜಿಲ್ಲೆಯಲ್ಲಿ ನಡೆಯು ತ್ತಿದೆ. ಡಿ.ಕೆ.ಸುರೇಶ್, ಬಾಲಕೃಷ್ಣ ಅವರನ್ನ ತೆಗೆಳದರೆ ನಿಮ್ಮ ಇತಿಹಾಸ ಕಾಲಿಸ್ಸನ್ನ ಮೆಚ್ಚಿಕೊಳ್ಳುತ್ತಾರೆ ಎಂಬುದನ್ನು ನಿಮ್ಮ ತಲೆಯಲ್ಲಿ ಕತ್ತು ಹಾಕಿ ಎಂದು ಸಲಹೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕೆಪಿಸಿಸಿ ಸದಸ್ಯ ಬ್ಯಾಟಪ್ಪ, ಬಿಡದಿ ರೈತ ಸೇವಾ ಸಹಕಾರ ಸಂಘದ ಅಧ್ಯಕ್ಷರಾದ ಜೀವನ್ ಬಾಬು, ಬಿಎಂಐಸಿಪಿ ನಿರ್ದೇಶಕ ರಮೇಶ್, ಜಿಪಿಡಿಎ ನಿರ್ದೇಶಕರಾದ ನರಸಿಂ ಹ್ ಂಕ್ಯ, ಕುಮಾರ್, ಕಾಂಗ್ರೆಸ್ ಮುಖಂಡ ರ್ ರಾವ ಹೊಸೂರು ರಾಜಣ್ಣ, ಸಿದ್ದರಾಜು, ಅಬ್ದುಸಾಕಿಬ್ ಬಿಟ್ಟಿಸ್ವಾಮಿ, ಗಂಗಾಧರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸೆ.13 ರಂದು ಉಚಿತ ಕಣ್ಣಿನ ತಪಾಸಣಾ ಶಿಬಿರ

ಸೂರ್ಯಪ್ರಗತಿನ್ಯೂಸ್.ಕಾಂ



ಕೊಳ್ಳೇಗಾಲ ಸುದ್ದಿ ಪ್ರತಿಕ್ಷ್ಣ ಸಾಮಾಜಿಕ ಸೇವಾ ಕೇಂದ್ರ ಮೈಸೂರು ರೆವರೆಂಡ್ ಫಾದರ್ ಜಾನ್ ವಿಕ್ಟರ್ ಸಂತ ಮೇರಿಸ್ ಚರ್ಚ್ ಮರಿಯಾರಪುರ ಎಸ್.ಎಲ್ ಮೂರ್ತಿ ಪ್ರಭಾವತಿ ಕುಟುಂಬವರ್ಗದವರು ಚಿಲಕವಾಡಿ ಗ್ರಾಮ, ಕೊಳ್ಳೇಗಾಲ ತಾಲ್ಲೂಕು ಲಯನ್ಸ್ ಕ್ಲಬ್ ಆಫ್ ಈರೋಡ್ ಕಾವೇರಿ ಟ್ರಸ್ಟ್ ಹಾಗೂ ಕೊಯಮತ್ತೂರು ಅರವಿಂದ ಕಣ್ಣಿನ ಆಸ್ಪತ್ರೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಸೆ.13 ಭಾನುವಾರ ಮರಿಯಾಪುರ ಸಂತ ವ್ಂರಿಯಮ್ಮನವರ ದೇವಾಲಯ ಆವರಣದಲ್ಲಿ ಬೆಳಿಗ್ಗೆ 07–00 ರಿಂದ ಮಧ್ಯಾಹ್ನ 12–00 ಗಂಟೆವರೆಗೆ ಆಯೋಜಿಸಲಾಗಿದೆ

ಈ ಶಿಬಿರದಲ್ಲಿ ಕಣ್ಣಿನ ರೋಗಗಳು ಕಣ್ಣಿನ ಪೊರೆ, ಹತ್ತಿರ ಮತ್ತು ದೂರದೃಷ್ಟಿ ದೋಷ, ಗ್ಲಾಕೋಮಾ, ಕಣ್ಣಿನ' ಲ್ಲಿ ಬಿರುಕು ಉಂಟಾಗುವುದು ಕಣ್ಣಿನಲ್ಲಿ ನೀರು ಸೋರುವಿಕೆ, ವಾರಿಕೆಣ್ಣು, ಕಣ್ಣಿನಲ್ಲಿ ಗಿಮ ಬರ'ವುದು, ರಾತ್ರಿ ಕುರುಡುತನವನ್ನು ಪರೀಕ್ಷಿಸಲಾಗುವುದು

ಶಿಬಿರಕ್ಕೆ ಬರುವವರಿಗೆ ವಿಶೇಷ ಸೂಚನೆಗಳು

ಶಿಬಿರಕ್ಕೆ ಬರುವವರು ಕುದ್ದಾಗಿಯೂ, ಮಾಸ್ಕ್ ಧರಿಸಿಕೊಂಡು ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳಬೇಕು.

ಪೊರೆಯಿದೆ ಎಂದು ತೀರ್ಮಾನಿಸಲ್ಪಟ್ಟವರನ್ನು ಅದೇ ದಿನ ಮಧ್ಯಾಹ್ನ ಕೊಯಮತ್ತೂರಿನ ಅರವಿಂದ ಕಣ್ಣಾಸ್ಪತ್ರೆಗೆ ಶಸ್ತ್ರ ಚಿಕಿತ್ಸೆಗಾಗಿ ಕರದುಕೊಂಡು ಹೋಗಲಾಗುವುದು.

ಶಸ್ತ್ರ ಚಿಕಿತ್ಸೆ ಯಿಷಧಿಗಳು, ಕಣ್ಣಿನಲ್ಲಿ ಅಳವಡಿಸುವ ಎಲ್ .ಓ.ಎಲ್ ಲೆನ್ಸ್, ಊಟ, ತಂಗುವ ಸ್ಥಳ ತಿಳಿಸಿದ್ದಾರೆ.

ಹಾಗೂ ಕೊಯಮತ್ತೂರಿಗೆ ಹೋಗಿ ಬರುವ ಬಸ್ ವ್ಯವಸ್ಥೆ ಎಲ್ಲವೂ ಉಚಿತ.

ಈ ಸದಾವಕಾಶವನ್ನು ತಪ್ಪದೇ ಬಳಸಿಕೊಳ್ಳಿ ಹಾಗೂ ಎರಡು ದಿವಸಗಳಿಗೆ ಬೇಕಾಗುವ ಬಟ್ಟೆಗಳನ್ನು ತೆಗೆದುಕೊಂಡು ಬರುವುದು.

ಶಸ್ತ್ರಚಿಕಿತ್ಸೆಗಾಗಿ ಆರಿಸಲ್ಪಡುವರೋಗಿಗಳು ಹೃದಯ, ರಕ್ತದ ಒತ್ತಡ, ಅಸ್ತಮಾ, ಸಕ್ಕರೆ ಕಾಯಿಲೆಗಳಿಂದ ನರಳುತ್ತಿದ್ದರೆ ಮುಂಚಿತವಾಗಿಯೇ ವೈದ್ಯರಿಂದ ಶಸ್ತ್ರ ಚಿಕಿತ್ಸೆಗೆ ಯಾವ ಅಡಚಣೆಯಿಲ್ಲವೆಂದು ಪ್ರಮಾಣಪತ್ರ ತಂದರೆ ಒಳ್ಳೆಯದು.

ಹತ್ತಿರ ದೃಷ್ಟಿ, ದೂರ ಮುಂತಾದವುಗಳನ್ನು ಸೂಕ್ತ ವಾ ಗಿ ಪರೀಕ್ಷಿಸಿ ಶಿಬಿರ ನಡೆಯುವ ಸ್ಥಳದ' ಲ್ಲಿಯೇ ಉತ್ತಮವಾದ ಕನ್ನಡಕಗಳನ್ನು ಕಡಿಮೆ ದ'ರದಲ್ಲಿ ಕೊಡಲಾಗುವುದು (300) (450), (5 00) ಮತ್ತು, ಅವಶ್ಯಕತೆ ಬರುವವರು ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ ಹಾಗೂ ವಾಸಿಯ ಮೊಬೈಲ್ ನಂ ತರತಕ್ಕದ್ದು ಎಂದು ಆಯೋಜಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.7ರಂದು ಉದ್ಯೋಗಕ್ಕಾಗಿ ನೇರ ಸಂದರ್ಶನ

ಸೂರ್ಯಪ್ರಗತಿನ್ಯೂಸ್.ಕ

ಗುಬ್ಬಿಯಲ್ಲಿ ಸೆ.5ರಂದು ಡಿಸಿಎಂ ಪ್ರಜಾ ಸೇವಾ ಆಂದೋಲನಕ್ಕೆ ಚಾಲನೆ : ಡಿಸಿ ಸ್ಥಳ ಪರಿಶೀಲನೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 5ರಂದು ಗುಬ್ಬಿ ಪಟ್ಟಣದಲ್ಲಿ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ನಡೆಯಲಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಗುಬ್ಬಿ ವೀರಣ್ಣ ಕಲಾಮಂದಿರಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರಿಗೆ ಆಗತ್ಯ ಮೂಲಭೂತ ಸೌಲಭ್ಯಗಳು, ಕುಡಿಯುವ ನೀರು, ಆಸನ ವ್ಯವಸ್ಥೆ, ವಾಹನ ನಿಲುಗಡೆ ಹಾಗೂ ವಿವಿಧ ಇಲಾಖೆಗಳು ಸ್ಥಾಪಿಸುವ ಮಳಿಗೆಗಳನ್ನು ಪರಿಶೀಲಿಸಿದರು.

ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವ ನಿರೀಕ್ಷೆಯಿರುವುದರಿಂದ ಯಾವುದೇ ರೀತಿಯ ಅನಾನುಕೂಲತೆ ಉಂಟಾಗದಂತೆ ಆಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸಾರ್ವಜನಿಕರ ಆಹವಾಲು ಸ್ವೀಕಾರ ಹಾಗೂ ನೋಂದಣಿ ವ್ಯವಸ್ಥೆ, ವಿವಿಧ ಇಲಾಖೆಗಳ ಸಮನ್ವಯತೆ ಮತ್ತು ಕಾರ್ಯಕ್ರಮದ ಸುಗಮ ನಿರ್ವಹಣೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಆಹವಾಲು ಸ್ವೀಕಾರ ಕೌಂಟರ್ ಗಳ ವ್ಯವಸ್ಥೆ, ಸಾರ್ವಜನಿಕರ ಅನುಕೂಲಕ್ಕಾಗಿ ಅತ್ಯಾಕರ್ಷಕ ಸೌಲಭ್ಯ ಹಾಗೂ ಕಾರ್ಯಕ್ರಮದ ನೇರ ಪ್ರಸಾರಕ್ಕೆ ಆಗತ್ಯ ವ್ಯವಸ್ಥೆಗಳನ್ನು ಕಲ್ಪಿಸುವಂತೆ ಸೂಚಿಸಿದರು. ವಿಶೇಷ ಚೇತನರಿಗೆ ಆಗತ್ಯ ಸೌಲಭ್ಯ ಕಲ್ಪಿಸಲು ಸೂಚಿಸಿದರು. ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಮನ್ವಯದಿಂದ ಕಾರ್ಯ ನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ನಿರ್ದೇಶನ ನೀಡಿದರು.

ಪ್ರಜಾ ಸೇವಾ ಆಂದೋಲನದ ಮೂಲಕ ಸಾರ್ವಜನಿಕರ ಆಹವಾಲುಗಳನ್ನು ನೇರವಾಗಿ ಆಲಿಸಿ, ಅರ್ಹ ಫಲಾನುಭವಿಗಳಿಗೆ ವಿವಿಧ ಸರ್ಕಾರಿ ಸೇವೆಗಳು ಹಾಗೂ ಸೌಲಭ್ಯಗಳನ್ನು ತ್ವರಿತ ವಾಗಿ ಒದಗಿಸುವ ನಿಟ್ಟಿನಲ್ಲಿ ಆಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಸಾರ್ವಜನಿಕರಿಂದ ಸ್ವೀಕರಿಸಲಾಗುವ ಆಹವಾಲುಗಳನ್ನು ನಿಗದಿತ ಸಮಯದೊಳಗೆ ಪರಿಹರಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಿಇಒ ಜಿ. ಪ್ರಭು, ಉಪವಿಭಾಗಾಧಿಕಾರಿ ಡಾ. ಕೆ. ಅರುಂಧತಿ ಚಂದ್ರನ್, ತಹಶೀಲ್ದಾರ್ ಡಾ. ಮೋಹನ್ ಕುಮಾರ್, ತಾಲೂಕು ಪಂಚಾಯತ್ ಇಒ ಶಿವಕುಮಾರ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಲಿಷ್ಠ ಭಾರತ ನಿರ್ಮಿಸುವಲ್ಲಿ ಅಂಬೇಡ್ಕರ್ ಕೊಡುಗೆ ಅಪಾರ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಡಾ: ಬಾಬಾಸಾಹೇಬ್ ಅಂಬೇಡ್ಕರ್ ಅವರು ಬರೀ ಒಬ್ಬ ವ್ಯಕ್ತಿಯಾಗಿರದೇ ಈ ನಾಡಿನ ಶಕ್ತಿಯಾಗಿದ್ದರು. ಬಲಿಷ್ಠ ಭಾರತವನ್ನು ನಿರ್ಮಿಸುವಲ್ಲಿ ಅವರ ಕೊಡುಗೆ ಅಪಾರವಾದುದು ಎಂದು ಬಿಜೆಪಿ ಹಿರಿಯ ಹಾಗೂ ವಿದ್ವಾಂಸ, ಕೇಂದ್ರ ನಾಟಕ ಸಂಗೀತ ಅಕಾಡೆಮಿಯ ಪ್ರಶಸ್ತಿ ಪುರಸ್ಕೃತ ಡಾ: ಲಕ್ಷ್ಮಣ್‌ದಾಸ್ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೆಎಸ್‌ಎಫ್‌ಸಿ ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ ಬುಧವಾರ ನಗರದ ಉತ್ತರ ಬಡಾವಣೆ ಶಿರಾರಸ್ತೆಯಲ್ಲಿರುವ ಕೆ.ಎಸ್.ಆ.ಎಫ್. ಶಿಕ್ಷಣ ಮಹಾವಿದ್ಯಾಲಯದ ಆವರಣದಲ್ಲಿ ಆಯೋಜಿಸಿದ್ದ ಭಾರತರತ್ನ ಡಾ: ಬಿ.ಆರ್. ಅಂಬೇಡ್ಕರ್ ಓದು ಮತ್ತು ಪ್ರಬಂಧ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಂಬೇಡ್ಕರ್ ಅವರು ತುಳಿತಕ್ಕೆ ಒಳಗಾಗಿದ್ದ ಎಲ್ಲಾ ಸಮುದಾಯಗಳ ಪ್ರತಿನಿಧಿಯಾಗಿ ಸಾಮಾಜಿಕ ಪರಿವರ್ತನೆಗೆ ನಾಂದಿ ಹಾಡಿದರು. ಸ್ವತಂತ್ರ ಭಾರತದ ಮೊದಲ ಕಾನೂನು ಸಚಿವರಾಗಿ ಅಂಬೇಡ್ಕರ್ ಸೇವೆ ಸಲ್ಲಿಸಿದ್ದರು. ಭಾರತದ ಸಂವಿಧಾನ ರಚನಾ ಸಮಿತಿಯ ಕರಡು ಅಧ್ಯಕ್ಷರಾಗಿ ಅವರು ಬೃಹತ್ ಮತ್ತು ಶ್ರೇಷ್ಠ ಸಂವಿಧಾನವನ್ನು ನೀಡಿದರು. ಅಸ್ಪೃಶ್ಯತೆ ನಿವಾರಣೆಗೆ, ಮಹಿಳೆಯರ ಹಕ್ಕುಗಳಿಗೆ ಮತ್ತು ಸಮಾನತೆಗೆ ಬೇಕಾದಷ್ಟನ್ನು ಹೋರಾಡಿದರು ಎಂದು ತಿಳಿಸಿದರು. ಪ್ರಾಸ್ತಾವಿಕ ನುಡಿಗಳನ್ನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಈಶ್ವರ್ ಕು. ಮಿರ್ಜಿ, ಸರ್ಕಾರವು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಿದ್ದು ಸಮಾಜದ ಎಲ್ಲಾ ವಿಭಾಗಗಳಲ್ಲಿ ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮವನ್ನು ರೂಪಿಸಿದೆ. ಇಲಾಖೆಯು ಡಾ: ಬಿ.ಆರ್. ಅಂಬೇಡ್ಕರ್ ಅವರ ಬರಹ, ಭಾಷಣ, ಸಂವಿಧಾನ ರಚನಾ ಸಭೆಯ ಚರ್ಚೆ, ನಡವಳಿ ಮೊದಲಾದ ಪುಸ್ತಕಗಳನ್ನು ಹೊರತಂದಿದ್ದು ಈ ಪುಸ್ತಕಗಳನ್ನು ಕೊಂಡು ಅವರ ಬಗ್ಗೆ ಇನ್ನಷ್ಟು ಮಾಹಿತಿ ಪಡೆಯಿರಿ ಎಂದು ಕರೆ ನೀಡಿದರು.

ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಮಲ್ಲಿಕಾರ್ಜುನ ಕೆಂಕೆರೆ ಮಾತನಾಡಿ, ಅಂಬೇಡ್ಕರ್ ಅವರ ಆದರ್ಶಗಳು ಇಂದಿಗೂ ನಮಗೆ ಸ್ಫೂರ್ತಿಯಾಗಿದೆ. ಅವರ ಹಾದಿಯಲ್ಲಿ ನಡೆಯುವುದು ನಮ್ಮ ಕರ್ತವ್ಯ ಅವರು ಈ ದೇಶಕ್ಕೆ ನೀಡಿದ ಮೀಸಲಾತಿ ನೀತಿಯಿಂದ ಬಡವರಿಗೆ ಅದರಲ್ಲೂ ತುಳಿತಕ್ಕೆ ಒಳಗಾದ ಎಲ್ಲಾ ಸಮುದಾಯಗಳು ಸಮಾಜಕ್ಕೆ ಬರಲು ಸಹಾಯಕವಾಯಿತು ಎಂದು ತಿಳಿಸಿದರು.

ಕೆ.ಎಸ್.ಆ.ಎಫ್ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ: ಆರ್. ಹರೀಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಡಾ: ಬಿ.ಆರ್. ಅಂಬೇಡ್ಕರ್ ಅವರ ಹುಟ್ಟು ಬಾಲ್ಯ, ಕುಟುಂಬ, ಅವರು ಎದುರಿಸಿದ ಅನೇಕ ಕಷ್ಟ ಸಾಮಾಜಿಕ ತಾರತಮ್ಯದ ಬಗ್ಗೆ ವಿವರಿಸಿದರು. ವಿದೇಶ ಗಳಲ್ಲಿ ಡಾಕ್ಟರೇಟ್ ಪದವಿಗಳನ್ನು ಪಡೆದು ಎಲ್ಲಂಗೂ ಮಾದರಿಯಾದರು. ಇವರನ್ನು ಆದರ್ಶವಾಗಿರಿಸಿಕೊಂಡು ಭವಿಷ್ಯ ರೂಪಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ವೇದಿಕೆಯಲ್ಲಿ ಸಹಾಯಕ ಪ್ರಾಧ್ಯಾಪಕರಾದ ಡಾ: ಟಿ.ಪಿ. ಕುಮಾರಸ್ವಾಮಿ ಹಾಗೂ ಪಿ. ರಾಮಕೃಷ್ಣ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಡಿ.ವಿ. ಸುರೇಶ್‌ಕುಮಾರ್ ಮೊದಲಾದವರು ಹಾಜರಿದ್ದರು. ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಐದು ವಿದ್ಯಾರ್ಥಿಗಳಿಗೆ ಪುಸ್ತಕ ರೂಪದಲ್ಲಿ ಬಹುಮಾನವನ್ನು ವಿತರಿಸಲಾಯಿತು.

ಸೆ.5ರಂದು 'ಪ್ರಜಾಸೇವೆ ಆಂದೋಲನ'

ತುಮಕೂರು: ತಾಲ್ಲೂಕಿನ ಹೆಬ್ಬೂರು ಹೋಬಳಿಯಲ್ಲಿ ಸಾರ್ವಜನಿಕರ ಕುಂದು-ಕೊರತೆಗಳನ್ನು ಆಲಿಸಿ ಸ್ಥಳದಲ್ಲಿಯೇ ಪರಿಹಾರ ಒದಗಿಸುವ ಉದ್ದೇಶದಿಂದ ಸೆಪ್ಟೆಂಬರ್ 5ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ಹೆಬ್ಬೂರು ಹೋಬಳಿ ಕೇಂದ್ರದ ಅಂಬೇಡ್ಕರ್ ಭವನದಲ್ಲಿ ಶಾಸಕ ಬಿ. ಸುರೇಶ್ ಗೌಡ ಅವರ ಅಧ್ಯಕ್ಷತೆಯಲ್ಲಿ 'ಪ್ರಜಾಸೇವೆ ಆಂದೋಲನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಹಶೀಲ್ದಾರ್ ರಾಜೇಶ್ವರಿ ತಿಳಿಸಿದ್ದಾರೆ.

ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿ, ಸರ್ಕಾರಿ ಯೋಜನೆಗಳ ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡಲಿದ್ದಾರೆ. ಸಾರ್ವಜನಿಕರಿಂದ ಸ್ವೀಕರಿಸುವ ಅರ್ಜಿಗಳ ಪೈಕಿ ಸ್ಥಳದಲ್ಲಿಯೇ ಪರಿಹಾರ ಒದಗಿಸಲು ಸಾಧ್ಯವಾಗುವ ಅರ್ಜಿಗಳನ್ನು ಸ್ವೀಕರಿಸಿ ಸ್ಥಳದಲ್ಲಿಯೇ ಪರಿಹಾರ ಒದಗಿಸಲಾಗುವುದು. ಹೆಬ್ಬೂರು ಹೋಬಳಿ ಹಾಗೂ ಸುತ್ತಮುತ್ತಲಿನ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಅವರು ಕೋರಿದ್ದಾರೆ.

ಮುಖ್ಯ ಶಿಕ್ಷಕರಿಗೆ ಆತ್ಮೀಯ ಬೀಳ್ಕೊಡುಗೆ



ಸೂರ್ಯಪ್ರಗತಿನ್ಯೂಸ್.ಕಾಂ

ಚಿಕ್ಕನಾಯಕನಹಳ್ಳಿ: ತಾಲೂಕಿನ ಹೊಯ್ಸಳಕಟ್ಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ಆರ್. ಪರಮೇಶ್ವರಮೂರ್ತಿ ಅವರು ಸೇವಾ ನಿವೃತ್ತಿ ಹೊಂದಿದ ಹಿನ್ನೆಲೆಯಲ್ಲಿ ಶಾಲಾ ಆವರಣದಲ್ಲಿ ಆತ್ಮೀಯ ಬೀಳ್ಕೊಡುಗೆ ಸಮಾರಂಭವನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು, ಶಿಕ್ಷಕರು, ಅಭಿಮಾನಿಗಳು, ವಿದ್ಯಾಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು, ವಿದ್ಯಾರ್ಥಿಗಳು ಹಾಗೂ ಪೋಷಕರು ಭಾಗವಹಿಸಿ ನಿವೃತ್ತ ಮುಖ್ಯ ಶಿಕ್ಷಕ ಪರಮೇಶ್ವರಮೂರ್ತಿ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ, ಶುಭಾಶಯಗಳನ್ನು ಕೋರಿದರು. ಶಿಕ್ಷಣ ಕ್ಷೇತ್ರದಲ್ಲಿ ಹಲವು ವರ್ಷಗಳ ಕಾಲ ಸೇವೆ ಸಲ್ಲಿಸಿದ ಪರಮೇಶ್ವರಮೂರ್ತಿ ಅವರ ಕರ್ತವ್ಯನಿಷ್ಠೆ ಹಾಗೂ ವಿದ್ಯಾರ್ಥಿಗಳ ಮೇಲಿನ ಕಾಳಜಿಯನ್ನು ಈ ಸಂದರ್ಭದಲ್ಲಿ ಗಣ್ಯರು ಸ್ಮರಿಸಿದರು. ಶಾಲೆಯ ಅಭಿವೃದ್ಧಿ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅವರು ನೀಡಿದ ಕೊಡುಗೆಯನ್ನು ಪ್ರಶಂಸಿಸಿದರು. ನಿವೃತ್ತಿಯ ನಂತರದ ಜೀವನವು ಸುಖ, ಶಾಂತಿ, ಆರೋಗ್ಯ ಮತ್ತು ಸಂತೋಷದಿಂದ ಕೂಡಿರಲಿ ಎಂದು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲರೂ ಹಾರೈಸಿ ಶುಭಕೋರಿದರು.

ಶ್ರೀಕೃಷ್ಣ ಜನ್ಮಾಷ್ಟಮಿ : ಮಾಂಸ ಮಾರಾಟ ನಿಷೇಧ

ತುಮಕೂರು: ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಹಬ್ಬದ ಪ್ರಯುಕ್ತ ಸೆಪ್ಟೆಂಬರ್ 4ರ ಮಧ್ಯರಾತ್ರಿ 12 ಗಂಟೆಯವರೆಗೆ ಮಾಂಸ ಮಾರಾಟವನ್ನು ನಿಷೇಧಿಸಲಾಗಿದೆ. ಈ ಅವಧಿಯಲ್ಲಿ ಮಾಂಸ ಮಾರಾಟ ಮಾಡುವುದಾಗಲಿ, ಸಂಗ್ರಹಣೆ ಮಾಡುವುದಾಗಲಿ, ಕಸಾಯಿಖಾನೆ ತೆರೆಯುವುದಾಗಲಿ ಮಾಡುವಂತಿಲ್ಲ ಹಾಗೂ ಕಸಾಯಿಕಾರ್ಯಾಲಯ ಅಧಿಯಂತರರು(ಪಶುಸಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ



ತುಮಕೂರು: ನಗರದ ಭಾಗ್ಯಮಂದಿರ, ಕೋತಿತೋಪಿನಲ್ಲಿರುವ ಶ್ರೀ ಅಂಗಾಳ ಪರಮೇಶ್ವರಿ ದೇವಸ್ಥಾನದಲ್ಲಿ 44ನೇ ವರ್ಷದ ವೈಭವದ ಜಾತ್ರಾ ಮಹೋತ್ಸವದ ಅತ್ಯಂತ ವಿದ್ಯುಕ್ತಭಕ್ತಿಯಿಂದ ನೆರವೇರಿತು. ಈ ಜಾತ್ರಾ ಮಹೋತ್ಸವದ ಅಂಗವಾಗಿ ಗಣಪತಿ ಪೂಜೆ, ಅಮ್ಮನವರಿಗೆ ವಿಶೇಷ ಹಾಲಿನ ಅಭಿಷೇಕ, ಅಮ್ಮನವರ ಬೆಳ್ಳಿ ಪಲ್ಲಕ್ಕಿ ಉತ್ಸವ, ವೈಭವದ ರಾಜಬೀದಿ ಗಳಲ್ಲಿ ಮೆರವಣಿಗೆಯನ್ನು ಸಹ ನೆರವೇರಿಸಲಾಯಿತು. ಈ ಎಲ್ಲಾ ಪೂಜಾ ಕೈಂಕರ್ಯಗಳಲ್ಲಿ ಭಕ್ತಾದಿಗಳು ಅತೀ ಹಚ್ಚಿನದಾಗಿ ಆಗಮಿಸಿ ದೇವರ ಕೃಪೆಗೆ ಪಾತ್ರರಾದರು. ಅವರೆಲ್ಲರಿಗೂ ದೇವಸ್ಥಾನದ ವತಿಯಿಂದ ಹೃದಯಪೂರ್ವಕ ಧನ್ಯವಾದಗಳನ್ನು ಅರ್ಪಿಸಿದರು.

ತಾಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟ



ಪಾವಗಡ, : ಪಾವಗಡ ತಾಲೂಕು ಮಟ್ಟದ ಸರ್ಕಾರಿ ಪದವಿ ಪೂರ್ವ ಕಾಲೇಜು ಗಳ ಕ್ರೀಡಾಕೂಟವು ದಿನಾಂಕ 02/09/2026 ರಿಂದ 03/09/2026 ರವರೆಗೆ ಅತ್ಯಂತ ಯಶಸ್ವಿಯಾಗಿ ಜರುಗಿತು. ಈ ಕ್ರೀಡಾಕೂಟದಲ್ಲಿ ನಡೆದ ಕಬಡ್ಡಿ ಪಂದ್ಯಾವಳಿಯಲ್ಲಿ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಕಾಲೇಜು ತಂಡವು ಅಮೋಘ ಪ್ರದರ್ಶನ ನೀಡಿ ಪ್ರಥಮ ಸ್ಥಾನವನ್ನು ಪಡೆದುಕೊಂಡು ಕಾಲೇಜಿಗೆ ಕೀರ್ತಿ ತಂದಿದೆ.

ವಿಜೇತ ತಂಡದ ನಾಯಕತ್ವವನ್ನು ಮಂಜುನಾಥ ಪೆಮ್ಮಿದ್ದರು. ತಂಡದಲ್ಲಿ ತಿರುಮಲ, ಬತ್ತಿ ತಿಮ್ಮಯ್ಯ, ವಿನಯ್, ನರೇಶ್, ಕವಿರಾಜ್, ಅಭಿರಾಮ್, ಸಾತ್ವಿಕ್, ಆಜಯ್, ಭಾನು, ಅನಿಲ್ ಅವರು ಆಟಗಾರರಾಗಿ ಮಿಂಚಿದರು. ತಂಡದ ಈ ಗೆಲುವಿನ ಹಿಂದೆ ಕೋಚ್ ಗಳಾದ ನರೇಶ್ ಬ್ರಾಮ್ಮ ಮತ್ತು ವೆಂಕಟೇಶ್ ಗೌಡರ ಅಪಾರ ಅನುಭವ ಹಾಗೂ ಮಾರ್ಗದರ್ಶನವಿದೆ. ವಿಜೇತ ತಂಡಕ್ಕೆ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕ ವೃಂದ ಹಾಗೂ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ.

ಎಸ್ ಎನ್ ಪಾಳ್ಯ ದಲಿತ ನಿವಾಸಿಗಳಿಂದ ಸ್ಮಶಾನ ಮಂಜೂರಾತಿಗಾಗಿ ನಗರ ಶಾಸಕರಿಗೆ ಮನವಿ



ತುಮಕೂರು ನಗರದ ವಾರ್ಡ್ ನಂಬರ್ 1ರ ವ್ಯಾಪ್ತಿಗೆ ಬರುವ ಎಸ್ ಎನ್ ಪಾಳ್ಯ ಹಾಗೂ ಬೆಸ್ತರ ಪಾಳ್ಯ ನಾಗಣ್ಣನ ಪಾಳ್ಯದ ದಲಿತ ನಿವಾಸಿಗಳು ಸುಮಾರು 60 ರಿಂದ 70 ವರ್ಷಗಳಿಂದ ಮಾದಿಗ ಜನಾಂಗ ಕೂಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಾ ಬಂದಿದ್ದು ನಮಗೆ ಇಲ್ಲಿಯವರೆಗೂ ಸರ್ಕಾರದಿಂದ ಯಾವುದೇ ಮೂಲಭೂತ ಸೌಲಭ್ಯಗಳು ಸಹ ವಂಚಿತರಾಗಿ ಬಂದಿದ್ದೇವೆ ಇಲ್ಲಿ ವಾಸಿಸುವ ಜನರಿಗೆ ಇಲ್ಲಿಯವರೆಗೂ ನಮ್ಮ ಸಮುದಾಯದವರು ಮರಣ ಹೊಂದಿದರೆ ಅವರನ್ನು ಅಂತ್ಯ ಸಂಸ್ಕಾರ ಮಾಡಲು ನಮಗೆ ಸ್ಮಶಾನವಿಲ್ಲ ನಾವು ನಿರಂತರ ವಾಗಿ 20 ವರ್ಷಗಳಿಂದ ನಿರಂತರವಾಗಿ ಹೋರಾಟ ಮಾಡುತ್ತಲಿದ್ದೇವೆ ಜಿಲ್ಲಾಧಿಕಾರಿಗಳಿಗೆ ಹಾಗೂ ಸ್ಥಳೀಯ ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸುತ್ತಾ ಬಂದರೂ ಸಹ ನಮ್ಮ ಏನೇನಿಯಮನ್ನು ತಿರಸ್ಕರಿಸಿ ನಮಗೆ ಯಾವುದೇ ಮೂಲಭೂತವಾದ ಸೌಲಭ್ಯಗಳನ್ನು ನೀಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಸ್ಥಳೀಯ ಮುಖಂಡರಾದ ಕೃಷ್ಣಮೂರ್ತಿಯಮ್ಮ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಎಸ್ ಎನ್ ಪಾಳ್ಯ ಗ್ರಾಮವು ಅಶ್ರಯ ಯೋಜನೆ ಆಡಿಯಲ್ಲಿ ಸುಮಾರು 60 ವರ್ಷಗಳ ಹಿಂದೆ 70 ರಿಂದ 80 ನಿವೇಶನಗಳನ್ನು ಸರ್ಕಾರ ಕಡುಬಡವರಿಗೆ ಬೆಳ್ಳಾನಿ ಗ್ರಾಮ ಹಂಚಾಯಿತಿ ಕಡೆಯಿಂದ ಇಲ್ಲಿನ ಜನರಿಗೆ ಆಶ್ರಯ ಕೊಟ್ಟಿದ್ದರೂ ಸಹ ತುಮಕೂರು ಸ್ಮಾರ್ಟ್ ಸಿಟಿ ಎಂದು ಕರೆಸಿಕೊಳ್ಳುವ ಈಗಿನ ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಮಹಾನಗರ ಪಾಲಿಕೆ ವತಿಯಿಂದ ನಮಗೆ ಯಾವುದೇ ರೀತಿಯ ಅಭಿವೃದ್ಧಿಯ ಕೆಲಸಗಳು ಮರೀಚಿಕೆಯಾಗಿವೆ ಈ ವಿಚಾರ ವಾಗಿ ಹಿಂದೆ ನಮ್ಮಿಂದ ಮತ ಪಡೆದ ಜನಪ್ರತಿನಿಧಿಗಳು ಸಹ ಇಲ್ಲಿ ವಾಸಿಸುವ ದಲಿತ ನಿವೇಶನದ ಜನರಿಗೆ ಯಾವುದೇ ರೀತಿಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಪ್ರಯೋಜನವಾಗಿಲ್ಲ ಈಗಲಾದರೂ ಸ್ಥಳೀಯ ಶಾಸಕರು ಹಾಗೂ ಸರ್ಕಾರ ಕೂಡಲೇ ಈ ನಮ್ಮ ಮನವಿಯನ್ನು ಪರಿಗಣಿಸಿ ನಮ್ಮ ಸ್ಮಾಮಾದಾಯವರಿಗೆ ಸ್ಮಶಾನ ಸಂಸ್ಕಾರ ಮಾಡಲು ನಮಗೆ ಭೂಮಿ ಮಂಜೂರು ಮಾಡಿಕೊಡಬೇಕೆಂದು ಒತ್ತಾಯಿಸಿದರು.

ಎಸ್ ಎನ್ ಪಾಳ್ಯದ ಯುವ ಮುಖಂಡ ಅರ್ಜುನ್ ಮಾತನಾಡಿ ಸರ್ಕಾರ ಈಗಾಗಲೇ ಮೊದಲು ದಲಿತರಿಗೆ ಸ್ಮಶಾನ ಮಂಜೂರಾತಿ ಮಾಡಿಕೊಂಡ ಡಬೇಕೆಂದು ಹಲವಾರು ಸುತ್ತೋಲೆಗಳನ್ನು ಹೊರಡಿಸಿದ್ದರು ಸಹ ಇಲ್ಲಿ ಬರುಕುತ್ತಿರುವ ನಮಗೆ ಮಹಾನಗರ ಪಾಲಿಕೆಯಿಂದ ಆಗಲಿ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದಿಂದಾಗಲಿ ಯಾವುದೇ ರೀತಿ ಸೌಲಭ್ಯಗಳನ್ನು ನಮಗೆ ಮಾಡಿಕೊಡದೆ ಇರುವುದು ವಿಚಿತ್ರವಾದ ಸಂಗತಿ ತುಮಕೂರು ನಗರ ಶಿರಾಗೇಟ್ ನ ಎಸ್ ಎನ್ ಪಾಳ್ಯದಲ್ಲಿ ಸರಿಸುಮಾರು 2,000 ದಿಂದ 2500 ಸಾವಿರ ಜನಸಂಖ್ಯೆಯುಳ್ಳ ಮಾದಿಗ ಸಮುದಾಯಕ್ಕೆ ಉತ್ತಮವಾದ ರಸ್ತೆ ಇಲ್ಲ ಇಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಬಡ ವಿದ್ಯಾರ್ಥಿಗಳಿಗ